ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

EMAIL : dairyadadaari@gmail.com ಸಂಪುಟ: 01 ಸಂಚಿಕೆ: 180
ಬೆಲೆ ರೂ : 2.00
ರಾಯಚೂರು
ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795
ಗುರುವಾರ: 25–06–2026

## ‘ಗೃಹಲಕ್ಷ್ಮಿ’ ಲೂಟಿ : ಉನ್ನತ ಮಟ್ಟದ ತನಿಖೆಗೆ ಬಿಜೆಪಿ ಆಗ್ರಹ

**ಬೆಂಗಳೂರು,ಜೂ. 24–** ಖಾತೆಯೇ ಇಲ್ಲದ ಗೃಹಲಕ್ಷ್ಮಿ ಹೆರಿಗೆ ಹಣ ವರ್ಗಾವಣೆ ಹಾಗೂ ಒಂದೇ ಖಾತೆಗೆ ಹಲವು ಕೋಟಿ ಹಣ ವರ್ಗಾವಣೆ ಆಗಿರುವ ಬಗ್ಗೆ ತನಿಖೆ ನಡೆಸುವಂತೆ ಪ್ರತಿಪಕ್ಷ ನಾಯಕ ಆರ್ ಅಶೋಕ್ ಆಗ್ರಹಿಸಿದ್ದಾರೆ ಗೃಹಲಕ್ಷ್ಮಿ ಹೆಸರಿನಲ್ಲಿ ಕೋಟಿ ಕೋಟಿ ಲೂಟಿ ಇದೇ ಕಾಂಗ್ರೆಸ್ ಸರ್ಕಾರದ ಅಸಲಿ ಗ್ಯಾರೆಂಟಿ ಹಣ ವರ್ಗಾವಣೆ ದೊಡ್ಡ ಹಗರಣವಾಗಿದೆ ಎಂದು ಅವರು ಕಿಡಿ ಕಾರಿದ್ದಾರೆ

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು ಮಹಿಳೆಯರ ಸಬಲೀಕರಣದ ಹೆಸರಿನಲ್ಲಿ ಕರ್ನಾಟಕದ ಇತಿಹಾಸದಲ್ಲೇ ನಡೆದ ಅತ್ಯಂತ ವ್ಯವಸ್ಥಿತವಾದ ಹಗಲು ದರೋಡೆ ಅಂದರೆ ಅದು ಕಾಂಗ್ರೆಸ್ ಸರ್ಕಾರದ ಗೃಹಲಕ್ಷ್ಮಿ ಗ್ಯಾರೆಂಟಿ. ಎಂದು ಖಾತೆಗಳೇ ಇಲ್ಲದ ಗೃಹಲಕ್ಷ್ಮಿಯರಿಗೆ ಹಣ ವರ್ಗಾವಣೆ ಆಗಿರುವ ಪತ್ರಿಕಾ ವರದಿಯನ್ನು ಉಲ್ಲೇಖಿಸಿ ಟ್ವೀಟ್ ಮಾಡಿದ್ದಾರೆ

ಗ್ಯಾರೆಂಟಿ ಯೋಜನೆಗಳ ಪ್ರಚಾರದ ಆಡಂಬರದ ಹಿಂದೆ ಜನರ ತೆರಿಗೆ ಹಣವನ್ನು ಹೇಗೆ ಲೂಟಿ ಹೊಡೆಯಲಾಗುತ್ತಿದೆ ಎಂಬುದನ್ನು ಮಹಾಲೇಖಪಾಲರ ಡೇಟಾ ಅನಾಲಿಟಿಕ್ಸ್ ವರದಿ ಸಾಕ್ಷಿ ಸಮೇತ ಜಗತ್ತಿನ ಮುಂದೆ ಬೆತ್ತಲೆ ಮಾಡಿದೆ.
ಕಾಂಗ್ರೆಸ್ ಸರ್ಕಾರದ ಭ್ರಷ್ಟ 'ಚಮತ್ಕಾರ'ಗಳು ಸಾಮಾನ್ಯ ಜನರನ್ನು ನಡುಗಿಸುವಂತಿವೆ!



**ಒಂದೇ ಖಾತೆಗೆ ಕೋಟಿ ಕೋಟಿ ಜಮಾ:** ಬರೋಬ್ಬರಿ 19,020 'ಗೃಹಲಕ್ಷ್ಮಿ' ಫಲಾನುಭವಿಗಳಿಗೆ ಕೇವಲ ಒಂದೇ ಒಂದು ಬ್ಯಾಂಕ್ ಖಾತೆ ಲಿಂಕ್ ಆಗಿದೆ! ಆ ಒಂದೇ ಒಂದು ನಿಗೂಢ ಖಾತೆಗೆ ಪ್ರತಿ ತಿಂಗಳು 3.80 ಕೋಟಿ ರೂಪಾಯಿ ಸದ್ದಿಲ್ಲದೆ ಜಮೆಯಾಗುತ್ತಿದೆ! ಆ ಖಾತೆ ಯಾರದ್ದು ಆ ಲೂಟಿಯ ಹಣ ನೇರವಾಗಿ ಯಾರ ಜೇಬಿಗೆ ಹೋಗುತ್ತಿದೆ, ಮುಖ್ಯಮಂತ್ರಿಶಿವಕುಮಾರ್ ಅವರೇ ಎಂದು ಪ್ರಶ್ನಿಸಿರುವ ಅವರು ಬ್ಯಾಂಕ್ ಖಾತೆ ವಿವರವೇ ಇಲ್ಲದೆ 46.52 ಕೋಟಿ ಲೂಟಿ: ಆಗಿದೆ ಎಂದಿದ್ದಾರೆ. ಯಾವುದೇ ಅಧಿಕೃತ ಬ್ಯಾಂಕ್ ಖಾತೆ ಸಂಖ್ಯೆಗಳ ದಾಖಲೆಗಳೇ ಇಲ್ಲದೆ ಒಟ್ಟು 23,262 ಖಾತೆಗಳಿಗೆ 46.52 ಕೋಟಿ ಹಣವನ್ನು ವರ್ಗಾವಣೆ ಮಾಡಲಾಗಿದೆ! ದಾಖಲೆಗಳೇ ಇಲ್ಲದ ಜಾಗಕ್ಕೆ ಇಷ್ಟೊಂದು ಕೋಟಿ ಹಣ ಹರಿದು ಹೋಗಲು ಹೇಗೆ ಸಾಧ್ಯ
ಕೆಲವು ಫಲಾನುಭವಿಗಳ ಹೆಸರಿನಲ್ಲಿ ಪದೇ ಪದೇ ಬ್ಯಾಂಕ್ ಖಾತೆಗಳನ್ನು ಬದಲಾಯಿಸಲಾಗಿದ್ದು, ಇಂತಹ 10 ಲಕ್ಷಕ್ಕೂ ಹೆಚ್ಚು ಶಂಕಾಸ್ಪದ ಮತ್ತು ಅಕ್ರಮ ದಾಖಲೆಗಳು ಪತ್ತೆಯಾಗಿವೆ! ಸಿಎಜಿ ಆಡಿಟ್ ಸಂಸ್ಥೆಯು ಇಲಾಖೆಗೆ ಪದೇ ಪದೇ ಜ್ಞಾಪನಾ ಪತ್ರಗಳನ್ನು ಕಳುಹಿಸಿ ವಿವರ ಕೇಳಿದರೂ, ನಿಮ್ಮ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಾಗೂ ಸರ್ಕಾರ ಈ ಮಹಾ ಹಗರಣವನ್ನು ಮುಚ್ಚಿಹಾಕಲು, ಕಡತಗಳನ್ನು ಬಚ್ಚಿಡಲು ಯತ್ನಿಸುತ್ತಿರುವುದು ಏಕೆ? ಎಂದು ಪ್ರಶ್ನಿಸಿದ್ದಾರೆ
ಗೃಹಲಕ್ಷ್ಮಿಯ ಹಣ ನಾಡಿನ ಬಡ ಹೆಣ್ಣುಮಕ್ಕಳಿಗೆ ತಲುಪುತ್ತಿದೆಯೋ ಅಥವಾ ನಿಮ್ಮ ಕಾಂಗ್ರೆಸ್ ಹೈಕಮಾಂಡ್‌ನ ಚುನಾವಣಾ ನಿಧಿ ತುಂಬಿಸಲು ಬಳಕೆಯಾಗುತ್ತಿದೆಯೋ? ಇದು ಕೇವಲ ತಾಂತ್ರಿಕ ದೋಷವಲ್ಲ, ಇದು ಸರ್ಕಾರದ ಉನ್ನತ ಮಟ್ಟದಲ್ಲೇ ನಡೆದಿರುವ ನೂರಾರು ಕೋಟಿ ರೂಪಾಯಿಗಳ ಹಗಲು ದರೋಡೆ!
ತಕ್ಷಣವೇ ಈ ಗ್ಯಾರೆಂಟಿ ಲೂಟಿಯ ಬಗ್ಗೆ ನಿಷ್ಪಕ್ಷಪಾತ ಉನ್ನತ ಮಟ್ಟದ ತನಿಖೆಯಾಗಬೇಕು ಮತ್ತು ತಪ್ಪಿತಸ್ಥರನ್ನು ಜೈಲಿಗಟ್ಟಬೇಕು. ಬಡವರ ಹೆಸರಿನಲ್ಲಿ ಕೋಟಿ ಕೋಟಿ ಲೂಟಿ ಹೊಡೆಯುತ್ತಿರುವ ನಿಮ್ಮ ಈ ಧೋಖಾ ಗ್ಯಾರೆಂಟಿ ಸರ್ಕಾರಕ್ಕೆ ಕನ್ನಡಿಗರು ತಕ್ಕ ಪಾಠ ಕಲಿಸುವುದು ನಿಶ್ಚಿತ! ಎಂದಿದ್ದಾರೆ

## ಜೂನ್ 25ರಿಂದ ಜೂನ್ 27ರ ಬೆಳಿಗ್ಗೆ 06 ಗಂಟೆವರೆಗೆ ರಾಯಚೂರು ಜಿಲ್ಲೆಯಾದ್ಯಂತ ಮಧ್ಯ ಮಾರಾಟ ಬಂದ್: ಜಿಲ್ಲಾಧಿಕಾರಿ ಪೂವಿತಾ



ಧೈರ್ಯದ ದಾರಿ

**ರಾಯಚೂರು ಜೂನ್ 24:** ರಾಯಚೂರು ಜಿಲ್ಲೆಯಾದ್ಯಂತ ಮೊಹರಂ ಹಬ್ಬದ ಸಮಯದಲ್ಲಿ ಶಾಂತಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಹಾಗೂ ಯಾವುದೇ ಅಹಿತಕರ ಘಟನೆ ಸಂಭವಿಸದಂತೆ ಮುಂಜಾಗ್ರತಾ ಕ್ರಮವಾಗಿ ಜೂನ್ 25ರ ಬೆಳಿಗ್ಗೆ 06ಗಂಟೆಯಿಂದ ಜೂನ್ 27ರ ಬೆಳಿಗ್ಗ 06 ಗಂಟೆವರೆಗೆ ಅಬಕಾರಿ ಕಾಯ್ದೆ 1965ರ ಕಲಂ 21 (1) ರನ್ವಯ ರಾಯಚೂರು ಜಿಲ್ಲೆಯಾದ್ಯಂತ ಎಲ್ಲ ರೀತಿಯ ಮಧ್ಯ ತಯಾರಿಕಾ ಘಟಕಗಳು ಹಾಗೂ ಸಾಗಾಣಿಕೆ ಮತ್ತು ಸಂಗ್ರಹಣೆಯನ್ನು/ ಮಾರಾಟ ಅಂಗಡಿಗಳನ್ನು ಬಂದ್ ಮಾಡುವಂತೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾದಂಡಾಧಿಕಾರಿಗಳಾದ ಪೂವಿತಾ ಎಸ್. ಅವರು ಆದೇಶ ಹೊರಡಿಸಿದ್ದಾರೆ.

## ವಿದ್ಯುತ್ ಸಂಪರ್ಕ ಕಡಿತಕ್ಕೆ ಆಕ್ರೋಶ: ಜೇಸ್ಕಾಂ ಕಚೇರಿಗೆ ಬೆಂಕಿ ಹಚ್ಚಿದ ಗ್ರಾಹಕ

ಧೈರ್ಯದ ದಾರಿ

**ಸಿರವಾರ, ಜೂನ್ 23:** ವಿದ್ಯುತ್ ಬಿಲ್ ಬಾಕಿ ಇದ್ದ ಕಾರಣಕ್ಕೆ ಸಂಪರ್ಕ ಕಡಿತಗೊಳಿಸಿದ್ದಕ್ಕೆ ಆಕ್ರೋಶಗೊಂಡ ಗ್ರಾಹಕರೊಬ್ಬರು ಜೇಸ್ಕಾಂ (GESCOM) ಶಾಖಾ ಕಚೇರಿಗೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ ಘಟನೆ ಸಿರವಾರ ತಾಲೂಕಿನ ಮಲ್ಲಟ ಶಾಖೆಯಲ್ಲಿ ಸೋಮವಾರ ನಡೆದಿದೆ.





ತಾಲೂಕಿನ ಹೊಸೂರು ಗ್ರಾಮದ ನಿವಾಸಿ ಶಿವಪ್ಪ ತಂದೆ ಬಸನಗೌಡ ಗಡಿಗೆ ಎಂಬುವವರ ಮನೆಗೆ 11,983 ವಿದ್ಯುತ್ ಬಿಲ್ ಬಾಕಿ ಇತ್ತು. ಈ ಹಿನ್ನೆಲೆಯಲ್ಲಿ, ಎಇಇ ಮೋಹನ್ ಸಿಂಗ್ ಅವರ ಆದೇಶದ ಮೇರೆಗೆ, ಮಲ್ಲಟ ಶಾಖೆಯ ಅಧಿಕಾರಿ ಈರೇಶ, ಸಿಬ್ಬಂದಿ ರಿಚರ್ಡ್ ಮತ್ತು ಗ್ರಾಮ ವಿದ್ಯುತ್ ಪ್ರತಿನಿಧಿ ಲಿಂಗಪ್ಪ ಅವರು ಶಿವಪ್ಪ ಅವರ ಮನೆಗೆ ತೆರಳಿ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಿದ್ದರು.

ಕಚೇರಿಗೆ ಬೆಂಕಿ: ತನ್ನ ಮನೆಯ ವಿದ್ಯುತ್ ಸಂಪರ್ಕ ಕಡಿತಗೊಳಿಸಿದ್ದನ್ನು ಕಂಡು ಕೆಂಡಾಮಂಡಲರಾದ ಶಿವಪ್ಪ, ನೇರವಾಗಿ ಮಲ್ಲಟ ಜೇಸ್ಕಾಂ ಕಚೇರಿಗೆ ಆಗಮಿಸಿದ್ದಾರೆ. ಅಲ್ಲಿ ಸಿಬ್ಬಂದಿಯನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿದಲ್ಲದೆ, ತಮ್ಮ ದ್ವಿಚಕ್ರ ವಾಹನದಿಂದ ಪೆಟ್ರೋಲ್ ತೆಗೆದು ಕಚೇರಿಯ ಬಾಗಿಲು ಮತ್ತು ಟೇಬಲ್ ಮೇಲೆ ಸುರಿದು ಬೆಂಕಿ ಹಚ್ಚಿದ್ದಾರೆ. ಪರಿಣಾಮ, ಟೇಬಲ್ ಮೇಲಿದ್ದ ಕಂಪ್ಯೂಟರ್ ಸುಟ್ಟು ಕರಕಲಾಗಿದೆ.

ಅಪಾಯದ ಅರಿವಾಗುತ್ತಿದ್ದಂತೆಯೇ ಭಯಭೀತರಾದ ಜೇಸ್ಕಾಂ ಸಿಬ್ಬಂದಿ ಸ್ಥಳದಿಂದ ಹೊರಬಂದು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಬಳಿಕ ಸಿರವಾರ ಪೊಲೀಸ್ ಠಾಣೆಗೆ ತೆರಳಿ ದೂರು ನೀಡಿದ್ದು, ಆರೋಪಿಯ ವಿರುದ್ಧ ಪ್ರಕರಣ ದಾಖಲಾಗಿದೆ. ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

## ಮುಸ್ಲಿಂ ಸಮುದಾಯದ ನಾಯಕರಿಗೆ ಸಚಿವ ಸ್ಥಾನ ನೀಡಿ: ಕಾಂಗ್ರೆಸ್ ಹೈಕಮಾಂಡ್‌ಗೆ ಸೈಯದ್ ಹುಸೇನ್ ಮನವಿ

ಧೈರ್ಯದ ದಾರಿ

**ಮಾನ್ವಿ:** ರಾಜ್ಯ ಸಚಿವ ಸಂಪುಟ ವಿಸ್ತರಣೆ ವೇಳೆ ಮುಸ್ಲಿಂ ಸಮುದಾಯಕ್ಕೆ ಸಮರ್ಪಕ ಪ್ರಾತಿನಿಧ್ಯ ಕಲ್ಪಿಸಿ, ಪ್ರಭಾವಿ ನಾಯಕರಾದ ಶಾಸಕ ತನ್ವೀರ್ ಸೇಠ್ ಮತ್ತು ರಿಜ್ವಾನ್ ಅರ್ಷದ್, ವಿಧಾನ ಪರಿಷತ್ ಸದಸ್ಯ ಸಲೀಂ ಅಹ್ಮದ್ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಕಾಂಗ್ರೆಸ್ ಹೈಕಮಾಂಡ್ ಹಾಗೂ ರಾಜ್ಯ ನಾಯಕರಿಗೆ ಕಾಂಗ್ರೆಸ್ ಮುಖಂಡ ಸೈಯದ್ ಹುಸೇನ್ ಮನವಿ ಮಾಡಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಬುಧವಾರ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2023ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವಲ್ಲಿ ಮುಸ್ಲಿಂ ಸಮುದಾಯ ಸೇರಿದಂತೆ ಎಲ್ಲಾ ವರ್ಗದ ಮತದಾರರು ಮತ್ತು ಕಾರ್ಯಕರ್ತರು ಮಹತ್ವದ ಪಾತ್ರ ವಹಿಸಿದ್ದಾರೆ. ಕೋಮುವಾದಿ ಬಿಜೆಪಿಯನ್ನು ಅಧಿಕಾರದಿಂದ ದೂರವಿಡುವ ಉದ್ದೇಶದಿಂದ ಸಮುದಾಯ ಒಗ್ಗಟ್ಟಿನಿಂದ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿದ್ದು, ಆ ಕೊಡುಗೆಯನ್ನು ಪಕ್ಷದ ವರಿಷ್ಠರು ಪರಿಗಣಿಸಬೇಕು ಎಂದು ಆಗ್ರಹಿಸಿದರು.

ಸಚಿವ ಸಂಪುಟ ವಿಸ್ತರಣೆ ಸಂದರ್ಭದಲ್ಲಿ ತನ್ವೀರ್ ಸೇಠ್, ಸಲೀಂ ಅಹ್ಮದ್ ಹಾಗೂ ರಿಜ್ವಾನ್ ಅರ್ಷದ್ ಅವರಿಗೆ ಅವಕಾಶ ನೀಡುವ ಮೂಲಕ ಸಮುದಾಯದ ಆಶೋತ್ತರಗಳಿಗೆ ಸ್ಪಂದಿಸಬೇಕು. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರು ಈ ಬೇಡಿಕೆಯನ್ನು ಈಡೇರಿಸಬೇಕೆಂದು ಒತ್ತಾಯಿಸಿದರು.

ಜಿಲ್ಲೆಗೂ ಸಚಿವ ಸ್ಥಾನ ನೀಡುವಂತೆ ಆಗ್ರಹ:
ರಾಯಚೂರು ಜಿಲ್ಲೆಯ ಜನಪ್ರತಿನಿಧಿಗಳಿಗೂ ರಾಜ್ಯ ಸಚಿವ ಸಂಪುಟದಲ್ಲಿ ಅವಕಾಶ ನೀಡಬೇಕು ಎಂದು ಸೈಯದ್ ಹುಸೇನ್ ಹೇಳಿದರು. ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರ ಸರ್ಕಾರದ ಅವಧಿಯಲ್ಲಿ ಅಮರೇಗೌಡ ಬಯ್ಯಾಪುರ ಅವರು ಸಚಿವರಾಗಿದ್ದರು. ಅದಾದ ಬಳಿಕ 2013ರ ಕಾಂಗ್ರೆಸ್ ಸರ್ಕಾರ, 2018ರ ಸಮ್ಮಿಶ್ರ ಸರ್ಕಾರ ಹಾಗೂ 2023ರ ಕಾಂಗ್ರೆಸ್ ಸರ್ಕಾರ ರಚನೆಯಾದಾಗಲೂ ಜಿಲ್ಲೆಗೆ ಸಚಿವ ಸ್ಥಾನ ದೊರೆತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.
ಶಾಸಕರಲ್ಲದಿದ್ದರೂ ತಮ್ಮ ಪ್ರಭಾವ, ಪಕ್ಷನಿಷ್ಠೆ ಹಾಗೂ ಅಭಿವೃದ್ಧಿ



ಕಾರ್ಯಗಳ ಮೂಲಕ ಹೈಕಮಾಂಡ್‌ನ ಮೆಚ್ಚುಗೆ ಪಡೆದಿರುವ ಎನ್.ಎಸ್. ಬೋಸರಾಜು ಅವರಿಗೆ ಸಚಿವ ಸ್ಥಾನ ನೀಡಿರುವುದನ್ನು ಸ್ವಾಗತಿಸುತ್ತೇವೆ. ಅದೇ ರೀತಿಯಲ್ಲಿ ರಾಯಚೂರು ಜಿಲ್ಲೆಯ ಅರ್ಹ ಜನಪ್ರತಿನಿಧಿಗಳಿಗೂ ಸಚಿವ ಸ್ಥಾನ ನೀಡುವ ಮೂಲಕ ಜಿಲ್ಲೆಯ ಅಭಿವೃದ್ಧಿಗೆ ಮತ್ತಷ್ಟು ವೇಗ ನೀಡಬೇಕು ಎಂದು ಒತ್ತಾಯಿಸಿದರು.
ಪ್ರಸ್ತುತ ರಾಯಚೂರು ಜಿಲ್ಲೆಯಲ್ಲಿ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರು ಸೇರಿ ಹಲವು ಜನಪ್ರತಿನಿಧಿಗಳಿದ್ದು, ಇವರಲ್ಲಿ ಒಬ್ಬರಿಗೆ ಸಚಿವ ಸ್ಥಾನ ನೀಡಲೇಬೇಕು ಎಂಬ ಅಭಿಪ್ರಾಯ ಪಕ್ಷದ ಕಾರ್ಯಕರ್ತರು ಹಾಗೂ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗುತ್ತಿದೆ. ಸಚಿವ ಸ್ಥಾನಕ್ಕಾಗಿ ಮುನ್ನೆಲೆಗೆ ಬಂದಿರುವ ಪ್ರಮುಖ ನಾಯಕರಲ್ಲಿ ಶಾಸಕ ಹಂಪನಗೌಡ ಬಾದರ್ಲಿ, ಹಂಪಯ್ಯ ನಾಯಕ್, ಬಸನಗೌಡ ದದ್ದಲ್ ಮತ್ತು ಬಸನಗೌಡ ತುರ್ವಿಹಾಳ್, ವಿಧಾನ ಪರಿಷತ್ ಸದಸ್ಯರಾದ ಎ. ವಸಂತಕುಮಾರ್ ಹಾಗೂ ಬಸನಗೌಡ ಬಾದರ್ಲಿ ಅವರ ಹೆಸರುಗಳು ಕೇಳಿಬರುತ್ತಿವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರದಲ್ಲಿ ಜಮೀರ್ ಅಹ್ಮದ್ ಖಾನ್ ಹಾಗೂ ರಹೀಮ್ ಖಾನ್ ಅವರಿಗೆ ಸಚಿವ ಸ್ಥಾನ ನೀಡಿರುವುದಕ್ಕೆ ಮತ್ತು ಯು.ಟಿ. ಖಾದರ್ ಅವರನ್ನು ವಿಧಾನಸಭೆಯ ಸ್ಪೀಕರ್ ಆಗಿ ನೇಮಕ ಮಾಡಿರುವುದಕ್ಕೆ ಸಮುದಾಯದ ಪರವಾಗಿ ಕೃತಜ್ಞತೆ ಸಲ್ಲಿಸಿದರು. ಅಲ್ಲದೆ, ಸೈಯದ್ ನಾಸಿರ್ ಹುಸೇನ್ ಮತ್ತು ಮನ್ಸೂರ್ ಅಲಿ ಖಾನ್ ಅವರನ್ನು ರಾಜ್ಯಸಭಾ ಸದಸ್ಯರನ್ನಾಗಿ ಆಯ್ಕೆ ಮಾಡಿರುವ ಕಾಂಗ್ರೆಸ್ ಪಕ್ಷದ ತೀರ್ಮಾನವನ್ನು ಸ್ವಾಗತಿಸಿ ಹೈಕಮಾಂಡ್‌ಗೆ ಧನ್ಯವಾದ ಅರ್ಪಿಸಿದರು.

## ಒಂದು ಹಸಿರು ಸಾವಿರಾರು ಉಸಿರು – ಮುಫ್ತಿ ಜೀಶಾನ್ ಮೌಲಾನ




ಧೈರ್ಯದ ದಾರಿ

**ಮಾನ್ವಿ :** ಖಾದ್ರಿಯವರ ಗ್ರೀನ್ ಸಿಟಿ ಕ್ಲೀನ್ ಸಿಟಿ ಎಂಬ ಕನಸ್ಸಿನಂತೆ ಇಂದು ಒಂದು ಹಸಿರು ಗಿಡ ನೆಡಿ ಮುಂದಿನ ಪೀಳಿಗೆಗೆ ಅದು ಸಾಸ್ರಾರು ಜನರಿಗೆ ಉಸಿರಾಡಲು ಆಮ್ಲಜನಕ ನೀಡುವುದು, ನಾವು ನೀವುಗಳು ಸಸಿಗಳನ್ನು ಬೆಳೆಸುವ ಮತ್ತು ಉಳಿಸುವ ಸಂಕಲ್ಪ ಮಾಡಬೇಕಿದೆ. ಆರೋಗ್ಯ ಮಹಾಭಾಗ್ಯ ಕಾಪಾಡಿಕೊಳ್ಳಲು ಇಂದಿನ ನಿರ್ಧಾರ ಅವಶ್ಯಕತೆ ಇದೆ, ಇಂದು ಮಾನ್ವಿಯ ಗುಡ್ಡದ ಮೇಲೆ ನಿಂತಾಗ ಗ್ರೀನ್ ಗಿಡ ಕಾಣುತ್ತಿವೆ ಎಂದರೆ ಅದಕ್ಕೆ ಸಸಿ ಹಾಕಿದ ಪೂರ್ವಜರ ಕೊಡುಗೆ, ರಾಯಚೂರು ರಸ್ತೆಯ ಕೊನೆ ತುದಿಯಿಂದ ಬಸ್ ನಿಲ್ದಾಣದವರೆಗೆ ಗಿಡಗಳು ತುಂಬಿರುತ್ತಿದ್ದವು ಆದರೆ ಇಂದು ಮಾಯವಾಗಿವೆ ಅದನ್ನು ಮರಳಿ ತರುವುದು ನಮ್ಮೆಲ್ಲಾರ ಜವಾಬ್ದಾರಿ ಹೌದು. ಗಿಡ ನೆಟ್ಟರೆ ಪುಣ್ಯ ಅತನಿಗೆ ಸ್ವರ್ಗದಲ್ಲಿ ಸ್ಥಾನ ಇದೆ ಎಂಬ ಮಹಮದ್ ಪ್ರವಾದಿಯವರ ಮಾತು ನೆನಪಾಗುತ್ತಿದೆ".ಎಂದು ಮುಫ್ತಿ ಸೈಯದ್ ಹಸನ್ ಜೀಶಾನ್ ಖಾದ್ರಿ ಖಾಸ್ಮಿ ಮೌಲಾನ ಉದ್ಘಾಟನೆಯಲ್ಲಿ ಹೇಳಿದರು.

ಮಾನ್ವಿ ಯುವ ಬಳಗ ಗ್ಲೋಬಲ್ ಕಂಪ್ಯೂಟರ್, ಭಾರತ ಆಪ್ಟಿಕಲ್ಸ್ ಸಿರವಾರ, ರಾತಿಬ್ ಫುಡ್ ಡಿಲೆವರಿ ಅಪ್, ಮಾನಸ ಎಂಟರ್ ಪ್ರೈಸಸ್ ಮಾನ್ವಿಯ ಯುವ ಬಳಗದ ತಂಡದಿಂದ ಸಸಿ ನೆಡುವ ಕಾರ್ಯಕ್ರಮ ಭಾಷುಮಿಯ ಸಾಹುಕಾರ ಪ್ರಥಮ ಧರ್ಜೆ ಕಾಲೇಜಿನಲ್ಲಿ ಉದ್ಘಾಟನೆ ಮಾಡಲಾಯಿತು.
ವೇಧಿಕೆಯಲ್ಲಿ ಧರ್ಮಗುರು ಸೈಯದ್ ಅಹಮದ್ ಖಾದ್ರಿ, ಮಾಜಿ ಜಿಲ್ಲಾ ಪಂಚಾಯತ ಅಧ್ಯಕ್ಷ ದೊಡ್ಡ ಬಸ್ಸಪ್ಪ ಗೌಡ, ಶಾಸಕರ ಪುತ್ರ ಶಿವರಾಜ್ ಅಡ್ವಕೇಟ್, ಪ್ರಾಚಾರ್ಯ ಜೆ.ಎಲ್ ಈರಣ್ಣ, ಮಾಜಿ ಪುರಸಭೆ ಅಧ್ಯಕ್ಷ ಬಸವಂತಪ್ಪ, ರಾಜ ಶ್ಯಾಮಸುಂದರ್ ನಾಯಕ್, ಸಿಡಿಸಿ ಸದಸ್ಯ ಸಿ. ಗುರುರಾಜ್, ನಂದಿಕೋಲ್ ಮಠ, ಪ್ರಾಧ್ಯಾಪಕ ಸೈಯದ್ ಮಿನ್ಹಾಜ್ ಉಲ್ ಹಸನ್, ಜಗನ್ನಾಥ್ ಮಾನ್ವಿಕರ್ ಗ್ರಾಮಾಭಿವೃದ್ಧಿ ಸಂಘದ ಅಧ್ಯಕ್ಷೆ ಡಾ. ರೋಹಿಣಿ ಮಾನ್ವಿಕರ್, ಲಕ್ಷ್ಮೀದೇವಿ, ಸೈಯದ್ ನಜೀರ್ ಖಾದ್ರಿ ಇದ್ದರು.
ಸ್ವಾಗತ ಸಿಂಡಿಕೇಟ್ ಸದಸ್ಯ ಜೀಶಾನ್ ಅಖಿಲ್ ಸಿದ್ಧಿಕಿ ನಡೆಸಿದರೆ ನಿರೂಪಣೆ ಮಹಿಬೂಬ್ ಮದ್ಲಾಪುರ ಮಾಡಿದರು.
ತಂಡದಲ್ಲಿ ಶೇಕ್ ಸೈಫುದ್ದಿನ್ ಅಜಗಾರ್, ಸೈಯದ್ ಮುಜಾಹಿದ್ ಮೈನುದ್ದಿನ್ ಖಾದ್ರಿ, ಮಹಮ್ಮದ್ ಶೋಹಿಬ್, ಶೇಕ್ ಆಸಿಫ್, ಜುಬೇರ್, ಆಫ್ತಾಬ್, ಫಯಾಜ್, ಉಮ್ಮೈರ್, ಸಾಬಿರ್, ಇರ್ಫಾನ್, ಅಮೀರ್ ಇನ್ನಿತರೆ ಎಲ್ಲಾ ಪಕ್ಷ, ಸಮುದಾಯ, ಸಂಘದ ಗಣ್ಯರು ಸಾಕ್ಷಿಯಾಗಿದ್ದರು.

## ರೈಲ್ವೆ ಯೋಜನೆಗಳ ವೇಗದ ಅನುಷ್ಠಾನಕ್ಕೆ ಸಂಸದ ಜಿ. ಕುಮಾರ ನಾಯಕ ಒತ್ತಾಯ

ಧೈರ್ಯದ ದಾರಿ

**ರಾಯಚೂರು:ಜೂ.24:** ಕಲ್ಯಾಣ ಕರ್ನಾಟಕ ಭಾಗದ ರೈಲ್ವೆ ಸಂಪರ್ಕ ವ್ಯವಸ್ಥೆಯನ್ನು ಬಲಪಡಿಸುವ ನಿಟ್ಟಿನಲ್ಲಿ ರಾಯಚೂರು–ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದರಾದ ಜಿ. ಕುಮಾರ ನಾಯಕ ಅವರು ನೈರುತ್ಯ ರೈಲ್ವೆ ನಿರ್ಮಾಣ ವಿಭಾಗದ ನೂತನ ಮುಖ್ಯ ಆಡಳಿತಾಧಿಕಾರಿ ಅಭಯ್ ಕುಮಾರ್ ಗುಪ್ತಾ ಅವರನ್ನು ಭೇಟಿ ಮಾಡಿ, ಕ್ಷೇತ್ರಕ್ಕೆ ಸಂಬಂಧಿಸಿದ ಪ್ರಮುಖ ರೈಲ್ವೆ ಯೋಜನೆಗಳ ಪ್ರಗತಿ ಹಾಗೂ ಅನುಷ್ಠಾನದ ಕುರಿತು ಸಮಗ್ರ ಚರ್ಚೆ ನಡೆಸಿದರು.

ಈ ವೇಳೆ ಕ್ಷೇತ್ರದ ಬಹುದಿನಗಳ ಬೇಡಿಕೆಯಾಗಿರುವ ಪ್ರಮುಖ ಯೋಜನೆಗಳಾದ ರಾಯಚೂರು–ಗಿಣಿಗೇರಾ ಹೊಸ ರೈಲು ಮಾರ್ಗ, ಗದಗ–ವಾಡಿ ರೈಲು ಮಾರ್ಗ ಹಾಗೂ2ನೇಪುಟಕ್ಕೆ



**ಮೊದಲನೇ ಪುಟದಿಂದ**

# ರೈಲ್ವೆ ಯೋಜನೆಗಳ ವೇಗದ ಅನುಷ್ಠಾನಕ್ಕೆ ಸಂಸದ ಜಿ. ಕುಮಾರ ನಾಯಕ ಒತ್ತಾಯ

ಪ್ರಸ್ತಾವಿತ ಅಲಮಟ್ಟಿ–ಯಾದಗಿರಿ ರೈಲು ಮಾರ್ಗದ ಅಂತಿಮ ಮಾರ್ಗ ನಿರ್ಧಾರ ಸಮೀಕ್ಷೆಯ ಟೆಂಡರ್ ಪ್ರಕ್ರಿಯೆ ಕುರಿತು ಸಂಸದರು ಅಧಿಕಾರಿಗಳ ಗಮನ ಸೆಳೆದರು.ರೈಲ್ವೆ ಮೂಲಸೌಕರ್ಯಗಳ ಅಭಿವೃದ್ಧಿಯು ಕಲ್ಯಾಣ ಕರ್ನಾಟಕ ಭಾಗದ ಆರ್ಥಿಕ ಪ್ರಗತಿಗೆ ಅತ್ಯಂತ ಮಹತ್ವದ್ದಾಗಿದ್ದು, ಈ ಯೋಜನೆಗಳು ಜಾರಿಗೆ ಬಂದರೆ ಕೈಗಾರಿಕೆ, ಕೃಷಿ, ವ್ಯಾಪಾರ–ವಹಿವಾಟು ಹಾಗೂ ಉದ್ಯೋಗ ಸೃಷ್ಟಿಗೆ ಹೊಸ ಅವಕಾಶಗಳು ತೆರೆದುಕೊಳ್ಳಲಿವೆ ಎಂದು ಸಂಸದ ಜಿ. ಕುಮಾರ ನಾಯಕ ಅಭಿಪ್ರಾಯಪಟ್ಟರು.ದಶಕಗಳಿಂದ ಈ ಭಾಗದ ಜನರು ನಿರೀಕ್ಷಿಸುತ್ತಿರುವ ರೈಲ್ವೆ ಯೋಜನೆಗಳನ್ನು ಆದ್ಯತೆಯ ಮೇರೆಗೆ ಕೈಗೆತ್ತಿಕೊಂಡು, ಅಗತ್ಯವಿರುವ ಆಡಳಿತಾತ್ಮಕ ಹಾಗೂ ತಾಂತ್ರಿಕ ಪ್ರಕ್ರಿಯೆಗಳನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಅವರು ಮನವಿ ಮಾಡಿದರು.ರೈಲ್ವೆ ಸಂಪರ್ಕ ವಿಸ್ತರಣೆಯಿಂದ ಗ್ರಾಮೀಣ ಮತ್ತು ನಗರ ಪ್ರದೇಶಗಳ ನಡುವಿನ ಸಂಪರ್ಕ ಮತ್ತಷ್ಟು ಸುಗಮವಾಗಲಿದ್ದು, ಸರಕು ಸಾಗಾಣಿಕೆ ವ್ಯವಸ್ಥೆ ಬಲಗೊಂಡು ಪ್ರದೇಶದ ಸಮಗ್ರ ಅಭಿವೃದ್ಧಿಗೆ ಸಹಕಾರಿಯಾಗಲಿದೆ ಎಂದು ಅವರು ತಿಳಿಸಿದರು.ಸಂಸದರು ಪ್ರಸ್ತಾಪಿಸಿದ ಯೋಜನೆಗಳ ಕುರಿತು ಸಕಾರಾತ್ಮಕವಾಗಿ ಸ್ಪಂದಿಸಿದ ಮುಖ್ಯ ಆಡಳಿತಾಧಿಕಾರಿ ಅಭಯ್ ಕುಮಾರ್ ಗುಪ್ತಾ ಅವರು, ರೈಲ್ವೆ ಯೋಜನೆಗಳ ಪ್ರಗತಿಗೆ ಅಗತ್ಯ ಸಹಕಾರ ನೀಡುವುದಾಗಿ ಹಾಗೂ ಅನುಷ್ಠಾನ ಪ್ರಕ್ರಿಯೆಯನ್ನು ವೇಗಗೊಳಿಸಲು ಇಲಾಖಾ ಮಟ್ಟದಲ್ಲಿ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.ಕಲ್ಯಾಣ ಕರ್ನಾಟಕ ಭಾಗವನ್ನು ರಾಜ್ಯ ಹಾಗೂ ರಾಷ್ಟ್ರದ ಪ್ರಮುಖ ಅಭಿವೃದ್ಧಿ ಕೇಂದ್ರಗಳೊಂದಿಗೆ ಸಂಪರ್ಕಿಸುವಲ್ಲಿ ಈ ರೈಲ್ವೆ ಯೋಜನೆಗಳು ಪ್ರಮುಖ ಪಾತ್ರ ವಹಿಸಲಿದ್ದು, ಅವುಗಳ ಶೀಘ್ರ ಪೂರ್ಣಗೊಳಿಸುವಿಕೆಗೆ ನಿರಂತರ ಪ್ರಯತ್ನಿಸಲಾಗುವುದು ಎಂದು ಸಂಸದರು ತಿಳಿಸಿದ್ದಾರೆ.

# ಗೊಂದಲರಹಿತ ಮತ್ತು ಸ್ಪಷ್ಟ ಮತದಾರ ಪಟ್ಟಿ ತಯಾರಿಸುವುದೇ ಎಸ್‌ಐಆರ್ ಕಾರ್ಯವಾಗಿದೆ ಡಾ.ಬಿರಾದಾರ

ಧೈರ್ಯದ ದಾರಿ




ಪ್ರಜಾಪ್ರಭುತ್ವ ದೇಶದಲ್ಲಿ .ಮತದಾನಕ್ಕೆ ಬಹಳ ಮಹತ್ವವಿದೆ. ಒಂದು ಮತ ಅಭ್ಯರ್ಥಿಯ ಸೋಲು ಗೆಲುವಿನ ನಿರ್ಧಾರ ಮಾಡುವ ಶಕ್ತಿ ಇದೆ .ಇಂತಹ ಶಕ್ತಿಯನ್ನು ಹೊಂದಿರುವಂತ ಮಾದರಿಯ ಮತದಾರ ಪಟ್ಟಿಯನ್ನು ತಯಾರಿಸುವ ಹಿನ್ನೆಲೆಯಲ್ಲಿ .ಜಿಲ್ಲೆಯ ಬಿ ಎಲ್ ಓ ನಿರಂತರವಾಗಿ ಮ್ಯಾಪಿಂಗ್ ಕಾರ್ಯದಲ್ಲಿ ಕೆಲಸವನ್ನ ಮಾಡುತ್ತಿದ್ದಾರೆ. ಶುದ್ಧ. ಸ್ಪಷ್ಟ. ನಿಖರತೆಯ ಮತದಾರರ ಪಟ್ಟಿಯನ್ನು ತಯಾರಿಸುವ ಹಿನ್ನಲೆಯಲ್ಲಿ ವಿಶೇಷ ಸಮಗ್ರ ಪರಿಷ್ಕರಣೆಯ ಕಾರ್ಯಕ್ರಮ ಈಗಾಗಲೇ ಕರ್ನಾಟಕ ರಾಜ್ಯಾದ್ಯಂತ ಪ್ರಾರಂಭಗೊಂಡಿತು.

ನಮ್ಮ ಜಿಲ್ಲೆಯಲ್ಲಿ ಈ ಕಾರ್ಯವನ್ನ ಚುರುಕು ಗೊಳಿಸಲು ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಸ್ವೀಟ್ ಸಮಿತಿ ಹಲವಾರು ಸಭೆಗಳನ್ನು ತರಬೇತಿಗಳನ್ನ ಮಾಹಿತಿಯ ಕಾರ್ಯಗಾರವನ್ನು ಮತ್ತು ತರಬೇತಿ ಏರ್ಪಡಿಸಿ ಕಾರ್ಯಕ್ರಮದ ಯಶಸ್ವಿಗೆ ನಿರಂತರವಾಗಿ ಕಾರ್ಯವನ್ನು ಮಾಡಲಾಗುತ್ತದೆ .ಮತದಾರರ ಪಟ್ಟಿಯಲ್ಲಿ ನಮ್ಮ ಹೆಸರು ಮೂರ್ನಾಲ್ಕು ಕಡೆ ಇದ್ದರೆ .ಅದು ಕಾನೂನ.ಬಾಹಿರ ಕೆಲಸ ನಾವು ಇಲ್ಲಿ ವಾಸ ಮಾಡುತ್ತೇವೆ ಅಲ್ಲಿ ನಮ್ಮ ಹೆಸರು ಮತದಾರ ಪಟ್ಟಿಯಲ್ಲಿ ಇರಬೇಕು.

ಬೇರೆಬೇರೆ ದೇಶದವರ ನಮ್ಮ ದೇಶದ ನಮ್ಮ ರಾಜ್ಯದ ಮತದಾರರ ಪಟ್ಟಿಯಲ್ಲಿ ಹೆಸರು ಸೇರಿಸುವಂತ ಸೇರಿಸಿದ ಉದಾಹರಣೆಗಳು ಈಗಾಗಲೇ ಹಲವಾರು ಘಟನೆಗಳಿಂದ ತಿಳಿದು ಬಂದಿದೆ .ಆ ಹಿನ್ನೆಲೆಯಲ್ಲಿ ಎಸ್.ಐ.ಆರ್ ಕಾರ್ಯನಿರ್ವಹಿಸಲಿದೆ ಎಂದು ರಾಯಚೂರಿನ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪ ನಿರ್ದೇಶಕರ ಕಾರ್ಯಾಲಯದಲ್ಲಿ ಮತದಾರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯ ಜಾಗೃತಿ ಸಭೆಯಲ್ಲಿ ಪಾಲ್ಗೊಂಡು ಮತದಾರರು ಸಾಕ್ಷರತಾ ಕ್ಲಬ್ ನೋಡಲ್ಲ ಅಧಿಕಾರಿ ಡಾ. ದಂಡಪ್ಪ ಬಿರಾದಾರ ಮಾತನಾಡಿದರು. ಅವರು ಮುಂದುವರೆದು ಮಾತನಾಡುತ್ತಾ ಮೃತ ಮತದಾರರ ಹೆಸರುಗಳು ತೆಗೆದು ಹಾಕಬೇಕು. ನಕಲಿ ಹೆಸರುಗಳ ನಿವಾರಣೆ ಮತ್ತು ಮತದಾರ ವಿವರಗಳನ್ನು ತಿದ್ದುಪಡಿ ಮತದಾನ ಪಟ್ಟಿಯ ಶುದ್ಧೀಕರಣ ಮತದಾನದ ಹಕ್ಕಿನ ರಕ್ಷಣೆ .ಪಾರದರ್ಶಕ ಚುನಾವಣೆ ನಡೆಸುವುದು. ಪ್ರಜಾಪ್ರಭುತ್ವವನ್ನು ಬಲಪಡಿಸುವುದು .ತಂತ್ರಜ್ಞಾನ ಆಧಾರಹಿತ ನಿಖರತೆ ಹೇಗೆ ಮಾಡಲಾಗುತ್ತದೆ ಮತದಾರ ಪಟ್ಟಿಯ ವಿಶೇಷ ಪರಿಸ್ಥಿತಿಯ ಒಂದು ಪ್ರಕ್ರಿಯೆಯಾಗಿದೆ ಎಂದು ಡಾ. ಬಿರಾದಾರ್ ಹೇಳಿದರು.

ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಯ ಉಪನಿರ್ದೇಶಕರಾದ ಶ್ರೀಮತಿ ಶರಣಮ್ಮ ನವರು ಮಾತನಾಡುತ್ತಾ .2002ರ ಮತದಾರ ಪಟ್ಟಿಯ ಆಧಾರಕ್ಕೆ ಇಟ್ಟುಕೊಂಡು. ಮತದಾರರ ಹೆಸರುಗಳನ್ನು ಮೂಲ ಮತದಾರ ಎಂದು ಪರಿಗಣಿಸಿ ಮ್ಯಾಪಿಂಗ್ ಮಾಡಿರುವ .ಕಾರ್ಯ ನಡೆದಿದೆ .ಇಂತಹ ಕಾರ್ಯದಲ್ಲಿ ಮಾಹಿತಿ ಕೇಳಲು ಬಿ ಎಲ್ ಓ ರವರು ಬಂದಾಗ ಅವರಿಗೆ ಸರಿಯಾಗಿ ಮಾಹಿತಿ ಕೊಡಬೇಕು .ಮತ್ತು ಸರಿಯಾದ ನಮೂನೆಯ ಫಾರ್ಮನ್ನು ತುಂಬಬೇಕು. ಮತದಾರ ಪಟ್ಟಿಯಲ್ಲಿ ಸೇರಿಸಲು ಹಲವು ದಾಖಲೆಗಳನ್ನು ಕೇಳಲಾಗುತ್ತದೆ. ಆ ದಾಖಲೆಗಳಲ್ಲಿ ಯಾವುದಾದರೊಂದು ದಾಖಲೆಗಳನ್ನು ನೀಡಿದರೆ ಬಿ ಎಲ್ ಓ ಮತದಾರ ಪಟ್ಟಿಯಲ್ಲಿ ಹೆಸರನ್ನು ಸೇರಿಸುತ್ತಾರೆ ಎಂದು ಹೇಳಿದರು. ಈ ಸಂದರ್ಭದಲ್ಲಿ. ಶ್ರೀಕುಮಾರ್ ಜಿಲ್ಲಾ ನಿರೂಪಣಾಧಿಕಾರಿ. ಗೋಕುಲ್ ಹುಸೇನ್ ಮಹಿಳಾ ಮತ್ತು ಮಕ್ಕಳ ಅಧಿಕಾರಿ .ಮನ್ಸೂರ್ ಶಿಶು ಅಭಿವೃದ್ಧಿ ನಾಗರತ್ನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಲಿಂಗಸುಗೂರು. ಶ್ರೀಮತಿ ಸಹನ ದ್ವಿತೀಯ ದರ್ಜೆ ಸಹಾಯಕ ಸಿಬ್ಬಂದಿ ಹಾಗೂ ಸೂಪಜರ ಸೇರಿದಂತೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಿಬ್ಬಂದಿಯವರು ಉಪಸ್ಥಿತರಿದ್ದರು

# ಜೂನ್ 29ರಂದು ರಾಯಚೂರು ತಾಲೂಕಿನಲ್ಲಿ ಜಪ್ತಿ ಮಾಡಲಾದ ಆಹಾರ ಧಾನ್ಯಗಳ ಬಹಿರಂಗ ಹರಾಜು ಪ್ರಕ್ರಿಯೆ

ಧೈರ್ಯದ ದಾರಿ

**ರಾಯಚೂರು ಜೂನ್ 22 :** ಜಿಲ್ಲೆಯ ರಾಯಚೂರು ತಾಲೂಕು ಆಹಾರ ಇಲಾಖೆಯಿಂದ ಸಗಟು ಗೋದಾಮುಗಳಲ್ಲಿ ವಿವಿಧ ಪ್ರಕರಣಗಳಲ್ಲಿ ಜಪ್ತಿ ಮಾಡಲಾದ 780.33 ಕ್ವಿಂಟಾಲ್ ಅಕ್ಕಿ ಹಾಗೂ 1.60 ಕ್ವಿಂಟಾಲ್ ಜೋಳದ ಆಹಾರ ಧಾನ್ಯಗಳನ್ನು ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲು ಜೂನ್ 29ರ ಬೆಳಿಗ್ಗೆ 10ಗಂಟೆಗೆ ರಾಯಚೂರು ತಹಶೀಲ್ದರರ ಕಚೇರಿಯಲ್ಲಿ ಬಹಿರಂಗ ಹರಾಜು ಪ್ರಕ್ರಿಯೆ ಹಮ್ಮಿಕೊಳ್ಳಲಾಗಿದ್ದು, ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬಹುದಾಗಿದೆ ರಾಯಚೂರು ತಹಶೀಲ್ದಾರರಾದ ಸುರೇಶ ವರ್ಮಾ ಅವರು ತಿಳಿಸಿದ್ದಾರೆ.

ಬಹಿರಂಗ ಹರಾಜು ಷರತ್ತುಗಳು: ಹರಾಜಿನಲ್ಲಿ ಭಾಗವಹಿಸುವ ಬಿಡ್ಡುದಾರರು ಎಪಿಎಂಸಿ ಪರವಾನಿಗೆದಾರರು ಅಥವಾ ಪರವಾನಿಗೆ ಪಡೆದ ಸಗಟು ಅಥವಾ ಚಿಲ್ಲರೆ ವ್ಯಾಪಾರಿಗಳು, ಕಮಿಷನ್ ಏಜೆಂಟರ್, ಅಕ್ಕಿ ಗಿರಣಿ ಮಾಲೀಕರು ಹಾಗೂ ದೊಡ್ಡ ಪ್ರಮಾಣದಾರ ಬಳಕೆದಾರ ಸಂಸ್ಥೆಗಳು ಆಗಿರಬೇಕು. ಹರಾಜಿನಲ್ಲಿ ಭಾಗವಹಿಸುವ ಬಿಡ್ಡುದಾರರು ಬಹಿರಂಗ ಹರಾಜು ದಿನ ಪೂರ್ವಾಹ್ನ 10ಗಂಟೆಯೊಳಗಾಗಿ ಹರಾಜು ಸ್ಥಳದಲ್ಲಿ ಹಾಜರಾಗಿ ಹೆಸರನ್ನು ನೋಂದಾಯಿಸಿಕೊಳ್ಳುವುದು ಹಾಗೂ 20,000 ರೂ.ಗಳನ್ನು (ಇಪತ್ತು ಸಾವಿರ ರೂಗಳ) ಇ.ಎಂ.ಡಿ ಮೊತ್ತವನ್ನು ಮುಂಗಡವಾಗಿ ಪಾವತಿಸಬೇಕು. ಇ.ಎಂ.ಡಿ ಮೊತ್ತವನ್ನು ಜಿಲ್ಲಾಧಿಕಾರಿಗಳು ರಾಯಚೂರು ಅವರ ಹೆಸರಿನಲ್ಲಿ ಡಿಡಿ ಮೂಲಕ ಪಾವತಿಸತಕ್ಕದ್ದು. ಹರಾಜಿನಲ್ಲಿ ಭಾಗವಹಿಸುವ ಬಿಡ್ಡುದಾರರು ಎರಡು ಪಾಸ್ ಪೋರ್ಟ್ ಸೈಜ್ ಭಾವಚಿತ್ರ, ಪರವಾನಿಗೆ ತಮ್ಮ ವ್ಯಾಪಾರಿ ನೋಂದಣಿ ಪತ್ರ ಅಥವಾ ಸಂಸ್ಥೆ ನೋಂದಣಿ ಪತ್ರ, ಆಧಾರ್ ಕಾರ್ಡಿನ ಪ್ರತಿಯನ್ನು ಹಾಜರುಪಡಿಸಿ ಹರಾಜಿನಲ್ಲಿ ಭಾಗವಹಿಸುವುದು.

ಹರಾಜು ಮುಗಿದ ನಂತರ ಠೇವಣಿ ಮೊತ್ತವನ್ನು ಗರಿಷ್ಠ ಹಾಗೂ ಎರಡನೇ ಗರಿಷ್ಠ ಬಿಡ್ಡುದಾರರನ್ನು ಹೊರತುಪಡಿಸಿ ಉಳಿದ ಬಿಡ್ಡುದಾರರಿಗೆ ಸ್ಥಳದಲ್ಲಿಯೇ ಹಿಂದಿರುಗಿಸಲಾಗುವುದು. ಗರಿಷ್ಠ ಬಿಡ್ಡುದಾರರು ನಿಗದಿತ ಅವದಿಯೊಳಗೆ ಪೂರ್ಣ ಹಣವನ್ನು ಪಾವತಿಸಲು ವಿಫಲವಾದಲ್ಲಿ ಠೇವಣಿ ಹಣವನ್ನು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು ನಂತರ ಎರಡನೇ ಬಿಡ್ಡುದಾರರಿಗೆ ಅವಕಾಶ ಮಾಡಿಕೊಡಲಾಗುವುದು ಇವರಿಗೆ ಸಹ ಇದೇ ನಿಯಮ ಅನ್ವಯವಾಗುತ್ತದೆ.

ಅಗತ್ಯ ವಸ್ತುಗಳ ಕಾಯ್ದೆಯಡಿಯಲ್ಲಿ ಪ್ರಕರಣಕ್ಕೆ ಒಳಗಾಗಿರುವ ವ್ಯಕ್ತಿ, ಸಂಸ್ಥೆಗಳು, ವ್ಯಾಪಾರಿಗಳು, ಸಾರ್ವಜನಿಕ ವಿತರಣಾ ಪದ್ದತಿ ವ್ಯವಸ್ಥೆಯಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವವರು ಹರಾಜಿನಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ.

ಜಪ್ತಿ ಮಾಡಲಾದ ಆಹಾರ ಧಾನ್ಯಗಳನ್ನು ಎಲ್ಲಿದೆಯೋ ಅಲ್ಲಿ ಹಾಗೂ ಹೇಗಿವೆಯೋ ಹಾಗೆ ಷರತ್ತಿನಡಿ ಹರಾಜು ಮಾಡಲಾಗುತ್ತಿರುವುದರಿಂದ ಹರಾಜಿನಲ್ಲಿ ಭಾಗವಹಿಸುವವರು ಅದಕ್ಕೂ ಮುನ್ನ ರಾಯಚೂರು ತಹಶೀಲ್ದಾರ್ ಕಚೇರಿಗೆ 10ಗಂಟೆಗೆಯೊಳಗೆ ಭೇಟಿ ನೀಡಿ ಆಹಾರ ಧಾನ್ಯಗಳ ಗುಣಮಟ್ಟವನ್ನು ಪರಿಶೀಲನೆ ಮಾಡತಕ್ಕದ್ದು.

ಬಹಿರಂಗ ಹರಾಜಿನಲ್ಲಿ ಬರುವ ಸ್ಪರ್ಧಾತ್ಮಕ ದರಗಳನ್ನು ಒಪ್ಪುವ ಅಥವಾ ತಿರಸ್ಕರಿಸುವ ಅಥವಾ ಈ ಹರಾಜವನ್ನು ರದ್ದುಪಡಿಸುವ ಅಧಿಕಾರವನ್ನು ಕಾಯ್ದಿರಿಸಲಾಗಿದೆ. ಆಯಾ ತಾಲ್ಲೂಕಿನ ತಹಶೀಲ್ದಾರರು, ಆಹಾರ ಸಿಬ್ಬಂದಿಯವರು ಮತ್ತು ಗೋದಾಮು ವ್ಯವಸ್ಥಾಪಕರು, ಕೆ.ಎಫ್.ಸಿ.ಎಸ್.ಸಿ ಅವರ ಸಮಕ್ಷಮದಲ್ಲಿ ಬಹಿರಂಗ ಹರಾಜನ್ನು ಮಾಡಲಾಗುವುದು.

ಬಿಡ್‌ನಲ್ಲಿ ನಮೂದಾಗುವ ದರಗಳನ್ನು ಜಿಲ್ಲಾಧಿಕಾರಿಗಳು ಅನುಮೋದಿಸಿದ ನಂತರ ಬಿಡ್‌ನ ಒಟ್ಟು ಮೌಲ್ಯವನ್ನು ಸರ್ಕಾರದ ಲೆಕ್ಕ ಶೀರ್ಷಿಕೆಗೆ ನಿಗದಿತ ದಿನಾಂಕದೊಳಗಾಗಿ ಜಮಾ ಮಾಡಿ ಚಲನದ ಹರಾಜುಪಡಿಸಿದ ನಂತರ ಹರಾಜಾದ ಪದಾರ್ಥ ಎತ್ತುವಳಿಗೆ ಅವಕಾಶ ನೀಡಲಾಗುವುದು.

ಎಪಿಎಂಸಿ ಸೆಸ್ ಮತ್ತು ಇತರೆ ಯಾವುದಾದರೂ ಶುಲ್ಕವನ್ನು ಸರ್ಕಾರಕ್ಕೆ ಕಟ್ಟಬೇಕಾದಲ್ಲಿ ಹರಾಜಿನಲ್ಲಿ ಆಯ್ಕೆಯಾದ ಬಿಡ್‌ದಾರರ ಪಾವತಿಸತಕ್ಕದ್ದು. ಬಹಿರಂಗ ಹರಾಜಾದ ಆಹಾರ ಧಾನ್ಯಗಳನ್ನು ತಮ್ಮ ಸ್ವಂತ ಖರ್ಚಿನಲ್ಲಿ ಆದೇಶ ನೀಡಿದ 3 ದಿನಗಳಲ್ಲಿ ತಾಲ್ಲೂಕಿನ ಸಗಟು ಗೋದಾಮುಗಳಿಂದ ಎತ್ತುವಳಿ ಮಾಡಬೇಕು.

ಹೆಚ್ಚಿನ ಮಾಹಿತಿ ಅಥವಾ ಷರತ್ತುಗಳನ್ನು ಉಪ ನಿರ್ದೇಶಕರ ಕಚೇರಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ರಾಯಚೂರು, ಅಥವಾ ಕರ್ನಾಟಕ ಆಹಾರ ನಾಗರಿಕ ಸರಬರಾಜು ನಿಗಮ ನಿಯಮಿತದ ಜಿಲ್ಲಾ ವ್ಯವಸ್ಥಾಪಕರು ರಾಯಚೂರು ಅಥವಾ ರಾಯಚೂರು ತಹಶೀಲ್ದಾರರ ಕಚೇರಿಗಳಿಗೆ ಭೇಟಿ ನೀಡಿ ವಿವರಗಳನ್ನು ಪಡೆಯಬಹುದಾಗಿದೆ ಎಂದು ರಾಯಚೂರು ತಹಶೀಲ್ದಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲಂಬಾಣಿ ಸಮುದಾಯದಿಂದ ವರದಕ್ಷಿಣೆ ಕಡಿವಾಣ ಸಂಕಲ್ಪಕ್ಕೆ ಕೈಜೋಡಿಸಲು ರಾಜು ಕರೆ



**ಆಳಂದ:ಜೂ.24:** ವರದಕ್ಷಿಣೆ ರಹಿತ ಸರಳ ವಿವಾಹ, ಶಿಕ್ಷಣ ಸಂಘಟನೆ ಆರ್ಥಿಕ ಸಮಾಜಿಕ ರಾಜಕೀಯವಾಗಿ ಸಂಘಟಿತರಾಗಿ ಸಮಾಜದ ಮುಖ್ಯವಾಹಿನಿಗೆ ಬರಲು ಲಂಬಾಣಿ ಸಮಾಜ ಬಾಂಧವರು ಪರಸ್ಪರ ವಿಶ್ವಾಸ ಮತ್ತು ಸೌಹಾರ್ದ ಬದುಕಿಗೆ ಒಗ್ಗೂಡಬೇಕು ಎಂದು ಬಂಜಾರಾ ಕ್ರಾಂತಿದಳ ರಾಜ್ಯಾಧ್ಯಕ್ಷ ರಾಜು ಜೆ. ಚವ್ಹಾಣ ಅವರು ಕರೆ ನೀಡಿದರು.

ತಾಲೂಕಿನ ಸೀಡಸ್‌ಫಾರಂ ತಾಂಡಾ, ನೆಹರು ನಗರ ತಾಂಡಾ, ಹೆಬಳ್ಳಿ ತಾಂಡಾ, ಪಿ.ಎನ್.ತಾಂಡಾ, ಮೋರಿಸಾಬ್ ತಾಂಡಾಗಳಲ್ಲಿ ಸರಣಿಯಾಗಿ ಲಂಬಾಣಿ ಸಮುದಾಯದಲ್ಲಿ ವರದಕ್ಷಿಣೆ ರಹಿತ ವಿವಾಹ ಶಿಕ್ಷಣ, ಸರ್ಕಾರಿ ಸೌಲಭ್ಯಗಳ ಹಕ್ಕುಗಳ ಅರಿವು ಮೂಡಿಸುವ ಜಾಗೃತಿ ಅಭಿಯಾನದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ತಾಲೂಕಿನ ಬಂಜಾರಾ ಸಮಾಜದ 52 ತಾಂಡಾ ಗಳ್‌ಲ್ಲಿ ವರದಕ್ಷಿಣೆ ಕಡಿವಾಣ ಹಾಕಲು ಬಂಜಾರಾ ಕ್ರಾಂತಿ ದಳ ಮತ್ತು ಸೇವಾಲಾಲ್ ಜಯಂತಿ ಸಮಿತಿ ಆಳಂದ ವತಿಯಿಂದ ತಾಂಡಾಗಳಲಿ ಸರಣಿ ಜಾಗೃತಿ ಅಭಿಯಾನ ಆರಂಭಗೊಂಡಿದೆ. ಸಮಾಜದಲಿ 30 ವರ್ಷ್ ಹಿಂದೆ ಗಂಡನ ಕಡೇವರು 2 ರಿಂದ 4 ಎತುಗಳು ಹೆಣಿನ ಕಡೆವರಿಗೆ ಕೊಟೊ ಮದುವೆ ಮಾಡುವ ಸಂಪರದಯ ಇವತ್ತಿನ ಕಾಲದಲಿ ವಂದು ಹೆಣಿನ್ ಮದುವೆ ಮಾಡಿದರೆ ಸುಮಾರು 10–ರಿಂದ 15 ಲಕ್ಷ ರೂಪಾಯಿ ಖರ್ಚು ಆಗುತ್ತಿದೆ ಆದ ಕಾರಣ ನಾವು ಬಂಜಾರಾ ಸಮಾಜ ವನ್ನು ಜಾಗೃತಿ ಮಾಡಲು ಪ್ರೇಯತನ್ ಮಾಡುತಿದ್ದೇವೆ ಇದರಿಂದ ನಮ್ಮ ಜನರಿಗೆ ತುಂಬಾ ತೊಂದರೆ ಆಗುತ್ತಿದೆ ಸಮಾಜ ಬಾಂಧವರ ಇಂಥ ಕಾರ್ಯಕ್ಕೆ ಕೈಜೊಡಿಸಬೇಕು ಎಂದು ಬಂಜಾರಾ ಕ್ರಾಂತಿದಳ ರಾಜ್ಯಾಧ್ಯಕ್ಷ ರಾಜು ಜೆ. ಚವ್ಹಾಣ ಅವರು ಸಮುದಾಯಕ್ಕೆ ಕರೆ ನೀಡಿದರು.

ಬಂಜಾರ ಸಮುದಾಯದ ತಾಂಡಾಗಳಲ್ಲಿ ಇನ್ನು ಮುಂದೆ ವರದಕ್ಷಿಣೆ ಪಡೆಯುವುದು ಅಥವಾ ನೀಡುವುದನ್ನು ಸಂಪೂರ್ಣವಾಗಿ ನಿಷೇಧಿಸಿ ಸಮುದಾಯದ ನಾಯಕರು ಹಾಗೂ ಹಿರಿಯರು ಐತಿಹಾಸಿಕ ನಿರ್ಧಾರ ಕೈಗೊಂಡಿದ್ದಾರೆ.

ಪಟ್ಟಣದ ಬಂಜಾರ ಭವನದಲ್ಲಿ ಅಖಿಲ ಇಂಡಿಯಾ ಬಂಜಾರೆ ಸೇವಾ ಸಂಘ ಹಾಗೂ ಸಂಯುಕ್ತ ಆಶ್ರಯದಲ್ಲಿ ನಡೆದ ಸಭೆಯಲ್ಲಿ ಈ ಕ್ರಾಂತಿಕಾರಿ ತೀರ್ಮಾನಕ್ಕೆ ಒಮ್ಮತ ವ್ಯಕ್ತವಾಯಿತು. ವಿವಾಹ ಕಾರ್ಯಕ್ರಮಗಳಲ್ಲಿ ವರದಕ್ಷಿಣೆ ರೂಪದಲ್ಲಿ ಹಣ, ವಾಹನ ಸೇರಿದಂತೆ ದುಬಾರಿ ಉಡುಗೊರೆಗಳನ್ನು ನೀಡುವುದನ್ನು ಕಟ್ಟುನಿಟ್ಟಾಗಿ ನಿಷೆಧಿಸಲಾಗಿದ್ದು, ನಿಯಮ ಉಲ್ಲಂಘಿಸುವವರಿಗೆ 1 ಲಕ್ಷ ರೂಪಾಯಿ ದಂಡ ವಿಧಿಸುವುದಾಗಿ ಸಂಘದ ತಾಲೂಕಾಧ್ಯಕ್ಷ ವೆಂಕಟೇಶ ರಾಠೋಡ್ ಘೋಷಿಸಿದ್ದಾರೆ.

ಅಷ್ಟೆ ಅಲ್ಲದೆ, ವರದಕ್ಷಿಣೆ ಪಡೆಯುವವರ ಮಾಹಿತಿ ನೀಡುವವರಿಗೆ 15 ಸಾವಿರ ರೂಪಾಯಿ ಬಹುಮಾನ ನೀಡುವುದಾಗಿಯೂ ತಿಳಿಸಲಾಗಿದೆ.

ಮದುವೆಗಳಲ್ಲಿ ಡಿಜೆ, ಧ್ವನಿವರ್ಧಕಗಳ ಬಳಕೆ ಹಾಗೂ ಮದ್ಯಪಾನವನ್ನು ಸಹ ನಿಷೆಧಿಸಲಾಗಿದ್ದು, ಸಮುದಾಯದ ಸಾಂಪ್ರದಾಯಿಕ ಆಚಾರ ವಿಚಾರಗಳಿಗೆ ಆದ್ಯತೆ ನೀಡಲು ನಿರ್ಧರಿಸಲಾಗಿದೆ. ಇತ್ತೀಚಿನ ದಿನಗಳಲ್ಲಿ ವರದಕ್ಷಿಣೆ ಪದ್ಧತಿ ಯಿಂದಾಗಿ ಬಡ ಕುಟುಂಬಗಳು ಅನುಭವಿಸುತ್ತಿರುವ ಸಂಕಷ್ಟ ಮತ್ತು ನೈತಿಕ ಮೌಲ್ಯಗಳ ಕುಸಿತದ ಹಿನ್ನೆಲೆಯಲ್ಲಿ ಈ ಜಾಗೃತಿ ಅಭಿಯಾನವನ್ನು ತೀವ್ರಗೊಳಿಸಲಾಗಿದೆ.ಸಭೆಯಲ್ಲಿ ರಾಜ್ಯ ಉಪಾಧ್ಯಕ್ಷ ಗೋವಿಂದರಾಜ್, ಜಿಲ್ಲಾಧ್ಯಕ್ಷ ಅಮರೇಶ ರಾಠೋಡ್ ಸೇರಿದಂತೆ ಹಲವು ಧಾರ್ಮಿಕ ಮುಖಂಡರು ಹಾಗೂ ತಾಂಡಾದ ಕಾರ್ಭಾರಿಗಳು ಭಾಗವಹಿಸಿದ್ದರು.

ಲಂಬಾಣಿ ತರುಣ ಸಂಘದ ಅಧ್ಯಕ್ಷ ಶಿವಾಜಿ ರಾಠೋಡ, ಸಮಾಜ ಮುಖಂಡ ಠಾಕೂರಸಿಂಗ್ ರಾಠೋಡ, ಲಂಬಾಣಿ ವಸತಿ ನಿಲಯ ಅಧ್ಯಕ್ಷ ಗಂಗಾರಾಮ ಪವಾರ, ಶಿವಾಜಿ ರಾಠೋಡ ಹೋದಲೂರ್ ಅನೇಕರ ಮುಂದಾಳತ್ವದಲ್ಲಿ ಸೀಡ್‌ಫಾರಂ ತಾಂಡಾ, ನೆಹರು ನಗರ ತಾಂಡಾ, ಹೆಬಳ್ಳಿ ತಾಂಡಾ, ಪಿ.ಎನ್. ತಾಂಡಾ, ಮೋರಿಸಾಬ್ ತಾಂಡಾಗಳಲ್ಲಿ ಮೂರುದಿನಗಳಿಂದ ಸತತವಾಗಿ ಜಾಗೃತಿ ಅಭಿಯಾನ ಕೈಗೊಂಡಿದ್ದು ಇನ್ನೂಳಿದ ತಾಂಡಾಗಳಲ್ಲಿ ಮುಂದುವರೆಯಲಿದೆ ಎಂದು ಮುಖಂಡರು ಹೇಳಿದರು.

# ತಂದೆ ತಾಯಿಗಳು ತಮ್ಮ ಮಕ್ಕಳ ಕಾರ್ಯ ಚಟುವಟಿಕೆಗಳ ನಿಗಾ ಇಡಬೇಕು :ಈರಣ್ಣ ಪಟ್ಟಣಶೆಟ್ಟಿ



**ಬಸವನ ಬಾಗೇವಾಡಿ :**ತಂದೆ ತಾಯಿಗಳು ತಮ್ಮ ಮಕ್ಕಳ ದಿನನಿತ್ಯದ ಕಾರ್ಯ ಚಟುವಟಿಕೆ ಮೇಲೆ ಗಮನ ಇಡಬೇಕು ನಿರ್ಲಕ್ಷ್ಯ ಮಾಡಿದರೆ ದುಶ್ಚಟಗಳಿಗೆ ತಮ್ಮ ಮಕ್ಕಳು ಬಲಿಯಾದರೆ ಅವರನ್ನು ಮತ್ತೆ ದಾರಿಗೆ ತರುವುದು ಕಷ್ಟದ ಕೆಲಸ ನಿಗಾ ಇಡುವುದರಿಂದ ಮಕ್ಕಳು ಸ್ವಲ್ಪ ದಾರಿ ತಪ್ಪಿದರೆ ತಂದೆ ತಾಯಿಗಳ ಜವಾಬ್ದಾರಿಯಾಗಿರುತ್ತದೆ ಎಂದು ಮಾತನಾಡಿದರು ಅಂತರಾಷ್ಟ್ರೀಯ ಮಾದಕವೇಶನ ಅಕ್ರಮ ಸಾಗಾಣಿಕೆ ವಿರೋಧ ದಿನ ನಿಮಿತ್ಯವಾಗಿ ಪಟ್ಟಣದಲ್ಲಿ ಪೊಲೀಸ್ ಠಾಣ ವತಿಯಿಂದ ಹಮ್ಮಿಕೊಂಡ ಬೃಹತ್ ಜಾ ತಾ ಚಾಲನೆ ನೀಡಿ ಅವರು ಮಾತನಾಡಿದರು ದೇಶದ ಭವಿಷ್ಯ ಇಂದಿನ ಯುವಕರ ಮೇಲಿದೆ ಯುವಕರು ದುಶ್ಚಟಗಳಿಗೆ ಬಲಿಯಾಗದೆ ಸದೃಢ ಭಾರತವನ್ನು ನಿರ್ಮಿಸುವ ಜವಾಬ್ದಾರಿ ಯುವಕರ ಮೇಲಿದೆ ಎಂದು ಸ್ಥಳೀಯ ವಿರಕ್ತ ಮಠದ ಸಿದ್ದಲಿಂಗ ಸ್ವಾಮೀಜಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು ಬಸವನಬಾಗೇವಾಡಿಯ ಸಿವಿಲ್ ನ್ಯಾಯಾಧೀಶರಾದ ಶ್ರೀ ಅಮಿತ್ ಗಟ್ಟಿ ನ್ಯಾಯಾಧೀಶ ಈರಪ್ಪ ಡವಳೇಶ್ವರ ಡಿವೈಎಸ್ಪಿ ಚಂದ್ರಕಾಂತ ನಂದ ರೆಡ್ಡಿ ಸಿಪಿಐ ಗುರುಶಾಂತ್ ದಾಸಾಳ್ ಪುರಸಭೆ ಮಾಜಿ ಅಧ್ಯಕ್ಷ ಶ್ರೀಮತಿ ಜಗದೇವಿ ಗುಂಡಳ್ಳಿ ಶ್ರೀ ಸಂಗಮೇಶ್ವರ ಓಲೇಕಾರ ಶ್ರೀ ಜಗದೀಶ್ ಕೊಟ್ರಶೆಟ್ಟಿ ಪೊಲೀಸ್ ಸಿಬ್ಬಂದಿ ಅನೇಕರು ಭಾಗವಹಿಸಿದ್ದರು ಜಾತವು ಪಟ್ಟಣದ ಪ್ರಮುಖ ರಸ್ತೆಯಲ್ಲಿ ಸಂಚರಿಸಿ ಶ್ರೀ ಬಸವೇಶ್ವರ ವೃತ್ತದಲ್ಲಿ ಮಾದಕ ವ್ಯಸನ ಅಕ್ರಮ ಸಾಗಾಣಿಕೆ ವಿರೋಧ ದಿನ ಅಂಗವಾಗಿ ಪ್ರತಿಜ್ಞಾವಿಧಿ ಸ್ವೀಕರಿಸಲಾಯಿತು ಪಟ್ಟಣದ ಅನೇಕ ಕಾಲೇಜು ವಿದ್ಯಾರ್ಥಿಗಳು ಸುಮಾರು 800 ವಿದ್ಯಾರ್ಥಿಗಳ ಭಾಗವಹಿಸಿದ್ದು ವೈದ್ಯರು ಖಾಸಗಿ ಮೆಡಿಕಲ್ ಅಂಗಡಿ ಮಾಲೀಕರು ಶಿಕ್ಷಕರು ವಿವಿಧ ಸಂಘಟನೆಯ ನಾಯಕರು ಭಾಗವಹಿಸಿದ್ದರು

# ಜೂ 30ರಿಂದ ಎಸ್‌ಐಆರ್: ಬಿಎಲ್‌ಒಗಳಿಗೆ ಸಮಗ್ರ ತರಬೇತಿ



**ಜಮಖಂಡಿ, ಜೂ.24** :ಜೂನ್ 30ರಿಂದ ಜಮಖಂಡಿ ವಿಧಾನಸಭಾ ಕ್ಷೇತ್ರದಲ್ಲಿ ಆರಂಭವಾಗಲಿರುವ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯಕ್ರಮದ ಅಂಗವಾಗಿ ನಗರದ ಬಿ.ಎಲ್.ಡಿ.ಇ ಕಾಲೇಜಿನಲ್ಲಿ ತಾಲೂಕು ಮಟ್ಟದ ನೋಡಲ್ ಅಧಿಕಾರಿಗಳು ಹಾಗೂ ಬೂತ್ ಮಟ್ಟದ ಅಧಿಕಾರಿಗಳ (ಬಿಎಲ್‌ಒ) ತರಬೇತಿ ಕಾರ್ಯಕ್ರಮ ಮಂಗಳವಾರ ನಡೆಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ ಅವರು, ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವನ್ನು ಸಮರ್ಪಕ ಹಾಗೂ ನಿಖರವಾಗಿ ಕೈಗೊಳ್ಳುವ ಕುರಿತು ತಾಲೂಕು ಮಟ್ಟದ ನೋಡಲ್ ಅಧಿಕಾರಿಗಳು ಮತ್ತು ಬಿಎಲ್‌ಒಗಳಿಗೆ ಸಮಗ್ರ ಮಾಹಿತಿ ನೀಡಿದರು.ಮನೆ ಮನೆಗೆ ತೆರಳಿ ಮತದಾರರ ಮಾಹಿತಿಯನ್ನು ಸಂಗ್ರಹಿಸುವ ವೇಳೆ ಯಾವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ವಿಶೇಷ ಎಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು. ಅಲ್ಲದೆ, ಮತದಾರರ ಹೆಸರು ಸೇರ್ಪಡೆ ಹಾಗೂ ಮೃತ ಮತದಾರರ ವಿವರಗಳ ಪರಿಶೀಲನೆಯನ್ನು ಚುನಾವಣಾ ಆಯೋಗದ ನಿಯಮಾನುಸಾರ ಕೈಗೊಳ್ಳುವಂತೆ ತಿಳಿಸಿದರು. ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯದಲ್ಲಿ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಿ, ಸಾರ್ವಜನಿಕರಿಗೆ ಅಗತ್ಯ ಮಾಹಿತಿಯನ್ನು ನೀಡಿ ಪ್ರಕ್ರಿಯೆಯನ್ನು ಯಶಸ್ವಿಗೊಳಿಸಬೇಕು ಎಂದು ಅವರು ಕರೆ ನೀಡಿದರು.ಈ ಸಂದರ್ಭದಲ್ಲಿ ತಹಶೀಲ್ದಾರ ಅನೀಲ ಬಡಗೇರ, ತಾಲೂಕು ಮಟ್ಟದ ನೋಡಲ್ ಅಧಿಕಾರಿಗಳು ಹಾಗೂ ಬೂತ್ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## 26 ರಂದು ಪ್ರತಿಭಾ ಪುರಸ್ಕಾರ ಸಮಾರಂಭ



**ಅಥಣಿ : ಜೂ.24:**ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಅತ್ಯಧಿಕ ಅಂಕಗಳನ್ನು ಗಳಿಸಿದ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಬರುವ ದಿ. 26 ರಂದು ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ಆದಿ ಬಣಜಿಗ ಯುವ ವೇದಿಕೆಯ ಅಧ್ಯಕ್ಷ ರಾಜು ಆಲಬಾಳ ಹೇಳಿದರು.

ಅವರು ಸೋಮವಾರ ಪಟ್ಟಣದಲ್ಲಿ ರಾಜ್ಯಮಟ್ಟದ ಪ್ರತಿಭಾ ಪುರಸ್ಕಾರ ಸಮಾರಂಭದ ಆಮಂತ್ರಣ ಪತ್ರಿಕೆ ಬಿಡುಗಡೆಗೊಳಿಸಿ ಮಾತನಾಡಿದರು. ಆದಿ ಬಣಜಿಗ ಸಮಾಜದ ಸಂಘಟನೆ ಹಾಗೂ ಮಕ್ಕಳ ಶಿಕ್ಷಣಕ್ಕೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಕಳೆದ 8 ವರ್ಷಗಳಿಂದ ಪ್ರತಿಭಾ ಪುರಸ್ಕಾರ ಹಮ್ಮಿಕೊಳ್ಳಲಾಗುತ್ತಿದೆ. ಬರುವ ದಿನಾಂಕ 26ರಂದು ಮುಂಜಾನೆ 9:00 ಗಂಟೆಗೆ ಪಟ್ಟಣದ ಶಿವಣಗಿ ಸಾಂಸ್ಕೃತಿಕ ಭವನದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಶೆಟ್ಟರ ಮಠದ ಮರುಳಸಿದ್ಧ ಸ್ವಾಮೀಜಿ ಸಮಾರಂಭದ ಸಾನಿಧ್ಯ ವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಲಕ್ಷ್ಮಣ ಸವದಿ, ಶಶಿಕಲಾ ಜೊಲ್ಲೆ, ಬಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಅಣ್ಣಾಸಾಹೇಬ ಜೊಲ್ಲೆ, ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಗಂಗಾಧರ ಸಂಬಣ್ಣಿ, ಐಎಎಸ್ ಅಧಿಕಾರಿ ಸುನೀಲ ಟಾಕಳೆ ಸೇರಿದಂತೆ ಇನ್ನಿತರರು ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಿದ್ದು ಗದ್ಯಾಳ, ಸುರೇಶ ಬಳ್ಳೊಳ್ಳಿ, ಸ್ವಾಗತ ತೋರಿ, ಚನ್ನಬಸಪ್ಪ ತೋರಿ, ಸತೀಶ ಪಾಟೀಲ, ರಮೇಶ ಮುಚ್ಚಂಡಿ, ಅಶೋಕ ಮಾರಾಪೂರ, ಬಸವರಾಜ ಮಾದಗುಡಿ, ಸುರೇಶ ಆಲಬಾಳ, ಚನ್ನಬಸು ಬಳ್ಳೊಳ್ಳಿ ರಾಜು ಮರಡಿ, ಕುಮಾರ ಬಿಳ್ಳೂರ, ಪರಸುರಾಮ ಬಿರಾದಾರ, ಹಣಮಂತ ವನಜೋಳಿ ಉಪಸ್ಥಿತರಿದ್ದರು.

## ಮುನಿರಾಬಾದ್ ನಲ್ಲಿ ನಾಳೆ ನೂತನ ಕ್ರಸ್ಟ್ ಗೇಟುಗಳ ಲೋಕಾರ್ಪಣೆ ಐತಿಹಾಸಿಕ ಕಾರ್ಯಕ್ರಮದಲ್ಲಿ ಮೂರು ರಾಜ್ಯಗಳ ಮುಖ್ಯಮಂತ್ರಿಗಳ ಸಮಾಗಮ



**ಹೊಸಪೇಟೆ.ಜೂ.24–** ಕರ್ನಾಟಕ, ಆಂಧ್ರಪ್ರದೇಶ ಮತ್ತು ತೆಲಂಗಾಣ ಸೇರಿದಂತೆ 3 ರಾಜ್ಯಗಳ 8 ಜಿಲ್ಲೆಗಳ ಜೀವನಾಡಿ ತುಂಗಭದ್ರಾ ಜಲಾಶಯಕ್ಕೆ ಅಳವಡಿಸಲಾದ ನೂತನ ಕ್ರಸ್ಟ್ ಗೇಟುಗಳ ಲೋಕಾರ್ಪಣೆಯ ಐತಿಹಾಸಿಕ ಸಮಾರಂಭ ನಾಳೆ ದಿ.ಜೂ.25 ರಂದು ಕೊಪ್ಪಳ ಜಿಲ್ಲೆಯ ಮುನಿರಾಬಾದ್ ನ ಸರ್ಕಾರಿ ಹೈಸ್ಕೂಲ್ ಮೈದಾನದಲ್ಲಿ ಜರುಗಲಿದೆ.

ಈ ಕಾರ್ಯಕ್ರಮಕ್ಕೆ ಕರ್ನಾಟಕ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಆಂಧ್ರ ಪ್ರದೇಶದ ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು ಹಾಗೂ ತೆಲಂಗಾಣ ಮುಖ್ಯಮಂತ್ರಿ ಎ,ರೇವಂತ್ ರೆಡ್ಡಿ ಅವರು ಸಾಕ್ಷಿ ಆಗಲಿದ್ದಾರೆ.ಕರ್ನಾಟಕ ರಾಜ್ಯದ ಕೊಪ್ಪಳ, ವಿಜಯನಗರ, ಬಳ್ಳಾರಿ, ರಾಯಚೂರು, ಗದಗ ಜಿಲ್ಲೆಗಳ ಎಲ್ಲ ಹಂತದ ಜನಪ್ರತಿನಿಧಿಗಳು, ನೀರಾವರಿ ಇಲಾಖೆಯ ಕೇಂದ್ರ, ರಾಜ್ಯ ಸರ್ಕಾರಗಳ ವಿವಿಧ ಅಧಿಕಾರಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ತುಂಗಭದ್ರ ಜಲಾಶಯ: ಕರ್ನಾಟಕ ರಾಜ್ಯದ ಉತ್ತರ ಕರ್ನಾಟಕ ಹಾಗೂ ಹೈದ್ರಾಬಾದ್ ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ ಕೃಷಿ, ಕೈಗಾರಿಕೆ, ಕುಡಿಯುವ ನೀರು ಪಡಯಲು ತುಂಗಭದ್ರೆಗೆ ಹೊಸಪೇಟೆ ಹತ್ತಿರ ಅಣೆಕಟ್ಟೆ ನಿರ್ಮಿಸಲು ಸ್ವಾತಂತ್ರ್ಯ ಪೂರ್ವದಲ್ಲಿ ಅಂದರೆ 1945ರಲ್ಲಿ ಕಾಮಗಾರಿ ಆರಂಭವಾಗಿ 1953ರಲ್ಲಿ ಪೂರ್ಣಗೊಂಡಿತು. ಮತ್ತು ಆಣೆಕಟ್ಟೆಗೆ ಸ್ಟೀಲ್ ವೇ ಗೇಟ್ಗಳ ಅಳವಡಿಕೆ ಕಾರ್ಯವು 1953ರಲ್ಲಿ ಆರಂಭವಾಗಿ 1958ರಲ್ಲಿ ಪೂರ್ಣಗೊಂಡಿತು. 1958 ರಿಂದ 2024ರವರೆಗೆ ತುಂಗಭದ್ರ ಜಲಾಶಯಕ್ಕೆ ಅಳವಡಿಸಿದ್ದ ಎಲ್ಲಾ 33 ಗೇಟ್ ವೇ ಗಳು ಸುರಕ್ಷಿತವಾಗಿ ಕಾರ್ಯನಿರ್ವಹಿಸಿದ್ದವು.

ಆಗಸ್ಟ್ 10, 2024ರ ರಾತ್ರಿ 10:50 ಗಂಟೆ ಸುಮಾರಿಗೆ ತುಂಗಭದ್ರ ಆಣೆಕಟ್ಟಿನ ಸ್ಟೀಲ್ ವೇ ಗೇಟ್ ಸಂಖ್ಯೆ 19, ನೀರಿನ ಸೆಳೆತಕ್ಕೆ ಕೊಚ್ಚಿ ಹೋಯಿತು. ತಕ್ಷಣ ಕಾರ್ಯ ಪ್ರವೃತ್ತರಾದ ತುಂಗಭದ್ರ ಮಂಡಳಿಯ ಅಧಿಕಾರಿಗಳು ಸ್ಟೀಲ್ ವೇ ಗೇಟ್ ತಜ್ಞರ ಹಾಗೂ ಹಿರಿಯ ಅಧಿಕಾರಿಗಳ ಸಲಹಾ ಸಮಿತಿ ಮಾರ್ಗದರ್ಶನದಲ್ಲಿ ಸ್ಟಾಪ್ ಲಾಗ್ ಅಳವಡಿಸುವ ಮೂಲಕ ದುರಸ್ತಿ ಮಾಡಿದರು. ಒಂದು ವಾರದಲ್ಲಿ ನೀರು ಸೋರಿಕೆಯನ್ನು ಸಂಪೂರ್ಣವಾಗಿ ನಿಲ್ಲಿಸಿ 2024ನೇ ಸಾಲಿನ ಮುಂಗಾರು ಮತ್ತು ಹಿಂಗಾರು ಬೆಳೆಗಳಿಗೆ ನೀರಿನ ಕೊರತೆ ಆಗದಂತೆ ಕ್ರಮ ವಹಿಸಿದ್ದರು.

ಗೇಟುಗಳ ಬದಲಾವಣೆಗೆ ಶಿಫಾರಸ್ಸು: ತುಂಗಭದ್ರಾ ಜಲಾಶಯದ 19ನೇ ನಂಬರಿನ ಗೇಟು ಕೊಚ್ಚಿ ಹೋದ ಹಿನ್ನಲೆಯಲ್ಲಿ ಕ್ರಸ್ಟ್ ಗೇಟುಗಳ ತಜ್ಞ ಎ.ಕೆ. ಬಜಾಜ್ ಅವರ ಸಲಹೆ ಮತ್ತು ನವದೆಹಲಿಯ ಎನ್ಡಿಎ ಸಮಿತಿಯ ಅಧ್ಯಕ್ಷ ಅನಿಲ್ ಜೈನ್ ನೇತೃತ್ವದ ಅಧಿಕಾರಿಗಳ ತಂಡ ಜಲಾಶಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಜಲಾಶಯದ ಎಲ್ಲಾ ಗೇಟುಗಳನ್ನು ಬದಲಾಯಿಸಲು ಶಿಫಾರಸ್ಸು ಮಾಡಿತು. ಅಲ್ಲದೆ ಜಲಾಶಯದ ಕ್ರಸ್ಟ್ ಗೇಟುಗಳ ತಜ್ಞ ಎನ್. ಕನ್ನಯ್ಯ ನಾಯ್ಡು ಅವರು, ಪರಿಶೀಲನಾ ವರದಿಯನ್ನು ಪರಿಶೀಲಿಸಿ ಸ್ಟೀಲ್ ವೇ ಗೇಟ್ಗಳನ್ನು ಪರಿಶೀಲಿಸಿದರು ಮತ್ತು ಒಂದು ಹಂಗಾಮು ಬೆಳೆ, ಕುಡಿಯಲು ನೀರು ಮತ್ತು ಕೈಗಾರಿಕಾ ಅಗತ್ಯಗಳನ್ನು ಪೂರೈಸಲು ಮಾತ್ರ 80 ಟಿಎಂಸಿ ವರೆಗೆ ಜಲಾಶಯದಲ್ಲಿ ನೀರು ಸಂಗ್ರಹಿಸಲು ಶಿಫಾರಸು ಮಾಡಿದರು.

2025-26ರಲ್ಲಿ ಜಲಾಶಯವನ್ನು 80 ಟಿಎಂಸಿಯಲ್ಲಿ ನಿರ್ವಹಿಸಲಾಗಿತ್ತು. ಗೇಟ್ಗಳು ಮತ್ತು ಚೈನ್ಗಳೆರಡಕ್ಕೂ 58 ಕೋಟಿ ಅಂದಾಜು ವೆಚ್ಚದೊಂದಿಗೆ ಟೆಂಡರ್ ಆಧಾರದ ಮೇಲೆ ಕಾಮಗಾರಿಯನ್ನು ಏಜೆನ್ಸಿಗೆ ನೀಡಲಾಯಿತು. ಎಲ್ಲಾ ಗೇಟ್ಗಳ ನಿರ್ಮಾಣ ಕಾರ್ಯವು ಏಪ್ರಿಲ್ 25, 2026 ರಂದು, ಅಂದರೆ ಕಾಮಗಾರಿಯು 121 ದಿನಗಳಲ್ಲಿ ಪೂರ್ಣಗೊಂಡಿತು.ಆಂಧ್ರಪ್ರದೇಶ ಸರ್ಕಾರದ ಜಲಸಂಪನ್ಮೂಲ ಇಲಾಖೆಯ ಸಲಹೆಗಾರ (ಯಾಂತ್ರಿಕ) ಎನ್. ಕನ್ನಯ್ಯ ನಾಯ್ಡು ಅವರು ಗೇಟ್ ಅಳವಡಿಕೆ ಕಾಮಗಾರಿಗಳನ್ನು ಪರಿಶೀಲಿಸಿ, ಕ್ರಸ್ಟ್ ಗೇಟುಗಳ ಆಳವಡಿಕೆ ಕುರಿತು ತೃಪ್ತಿ ವ್ಯಕ್ತಪಡಿಸಿದರು.ತುಂಗಭದ್ರಾ ಜಲಾಶಯದ ಎಲ್ಲಾ 33 ಕ್ರಸ್ಟ್ ಗೇಟುಗಳು ಹಾಗೂ ನೂತನ ಚೈನ್ ಅಳವಡಿಕೆ ಪೂರ್ಣಗೊಂಡಿದ್ದು. ತಜ್ಞರ ಹಾಗೂ ಹಿರಿಯ ಅಧಿಕಾರಿಗಳ ಸಲಹೆಗಳ ಪ್ರಕಾರ ಗೇಟ್ಗಳ ಸುರಕ್ಷತೆಯ ಕುರಿತು ಪರೀಕ್ಷೆಯನ್ನು ಮಾಡಲಾಗಿದೆ. ಪ್ರಸ್ತುತ ಜಲಾಶಯದಲ್ಲಿ 1633 ಅಡಿ ವರೆಗೆ ನೀರು ಸಂಗ್ರಹಣೆಗೆ ಸಿದ್ಧವಾಗಿದೆ.

1944 ರಲ್ಲಿ ಮದ್ರಾಸ್ ಮತ್ತು ಹೈದರಾಬಾದ್ ನಡುವಿನ ಒಪ್ಪಂದದಂತೆ ಮದ್ರಾಸ್ ಮತ್ತು ಹೈದರಾಬಾದ್ ಸರ್ಕಾರಗಳು ಅಂತಿಮವಾಗಿ ತುಂಗಭದ್ರಾ ಯೋಜನೆಯ ನಿರ್ಮಾಣವನ್ನು ಪ್ರಾರಂಭಿಸಲು ಅನುಮತಿ ನೀಡಿದವು. ತುಂಗಭದ್ರಾ ಜಲಾಶಯ ನಿರ್ಮಾಣ ಯೋಜನೆಯು ಫೆಬ್ರವರಿ 28, 1945 ರಂದು ಶಿಲಾನ್ಯಾಸಗೊಳ್ಳುವ ಮೂಲಕ ಜಲಾಶಯ ನಿರ್ಮಾಣಕ್ಕೆ ಚಾಲನೆ ನೀಡಲಾಯಿತು.ಅಂದಿನಿಂದ ನಿರಂತರವಾಗಿ ಕರ್ನಾಟಕ ಮತ್ತು ಅವಿಭಜಿತ ಆಂಧ್ರಪ್ರದೇಶ ರಾಜ್ಯಗಳಿಗೆ ತುಂಗಭದ್ರಾ ಜಲಾಶಯದಿಂದ ಕುಡಿಯುವ ನೀರು, ಕೃಷಿ, ಕೈಗಾರಿಕೆಗಳಿಗೆ ನೀರು ಪೂರೈಸಲಾಗುತ್ತಿದೆ. ಕರ್ನಾಟಕ ರಾಜ್ಯದ ಇಂದಿನ ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೃಷಿ, ಕೈಗಾರಿಕೆ ಮತ್ತು ಜನರ ಜೀವನ ಮಟ್ಟ ಸುಧಾರಣೆಯಲ್ಲಿ ತುಂಗಭದ್ರಾ ಜಲಾಶಯವು ಮಹತ್ವದ ಕೊಡುಗೆಯನ್ನು ನೀಡುತ್ತಾ ಬಂದಿದೆ.

# ಕಾಯಕ, ದಾಸೋಹದ ಪರಿಕಲ್ಪನೆ ನೀಡಿದವರು ಬಸವಣ್ಣ :ಮಲ್ಲಿಕಾರ್ಜುನ ಸ್ವಾಮೀಜಿ



**ಬಸವನ ಬಾಗೇವಾಡಿ :**ತಾಲೂಕಿನ ಇಂಗಳೇಶ್ವರ ಗ್ರಾಮದ ವಿರಕ್ತಮಠದಲ್ಲಿ ಲಿಂಗೈಕ್ಯ ಸಿದ್ದಲಿಂಗ ಶಿವಯೋಗಿಗಳ 92ನೇ ಜಾತ್ರಾ ಮಹೋತ್ಸವ ಲಿಂಗೈಕ್ಯ ಚನ್ನಬಸವ ಮಹಾಸ್ವಾಮಿಗಳ 95ನೇ ಗುರುವಂದನ ಸಮಾರಂಭದ ಕಾರ್ಯಕ್ರಮವನ್ನು ಉದ್ಘಾಟಿಸಿ ಧಾರವಾಡದ ಮುರ್ಘಾಮಠದ ಮಲ್ಲಿಕಾರ್ಜುನ ಸ್ವಾಮೀಜಿ ಮಾತನಾಡಿದರು 12 ಶತಮಾನದಲ್ಲಿ ಬಸವಣ್ಣವರು ಅನುಭವ ಮಂಟಪ ನಿರ್ಮಿಸಿ ಪ್ರತಿಯೊಬ್ಬ ಶರಣರು ಕಾಯಕ ಮಾಡಿ ದಾಸೋಹ ನಡೆಸುವ ಕಲ್ಪನೆಯನ್ನು ಜಗಜ್ಯೋತಿ ಬಸವಣ್ಣವರು ನಾಡಿಗೆ ಸಾರಿದರು ರಾಜ್ಯದಲ್ಲಿ ಅನೇಕ ಮಠಗಳು ಅಕ್ಷರ ದಾಸೋಹ ಬಸವನ ತತ್ವ ಆದರ್ಶಗಳನ್ನು ಮನೆ ಮನೆಗಳ ಮುಟ್ಟಿಸುವ ಕೆಲಸ ಮಾಡುತ್ತೇವೆ ಅದರಂತೆ ಇಂಗಳೇಶ್ವರ ವಿರಕ್ತ ಮಠದ ಲಿಂಗೈಕ್ಯ ಚೆನ್ನಬಸವ ಸ್ವಾಮೀಜಿಯವರು ಬಸವಣ್ಣನವರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡಿದ್ದರು ಬಸವಣ್ಣವರ ವಚನಗಳು ಮುಂದಿನ ಪೀಳಿಗೆಗೆ ಸಿಗುವಂತೆ ಮುಂದಾಲೋಚನೆ ಮಾಡಿ ಇಂಗಳೇಶ್ವರ ಮಠದಲ್ಲಿ ವಚನ ಶಿಲಾಮಂಟಪವನ್ನು ನಿರ್ಮಿಸಿದರು ಅದ್ಭುತ ಕಾರ್ಯ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದರು ಈ ಕಾರ್ಯಕ್ರಮದ ನೇತೃತ್ವವನ್ನು ಶ್ರೀ ಮಠದ ಪೀಠಾಧ್ಯಕ್ಷರಾದ ಡಾ ಸಿದ್ದಲಿಂಗ ಸ್ವಾಮೀಜಿ ಮಾತನಾಡಿ ಈ ಕಾರ್ಯಕ್ರಮಕ್ಕೆ ಗಣ್ಯ ವ್ಯಕ್ತಿಗಳು ಕಾಣದಿರಲು ಕಾರಣ ನಾನು ಒಂದು ಸಲ ಮಾತ್ರ ಅವರ ಸಂಪರ್ಕ ಮಾಡಿದೆ ನನಗೆ ಮೈಯಲ್ಲಿ ಹುಷಾರಿಲ್ಲದ ಪ್ರಯುಕ್ತ ಮತ್ತೊಮ್ಮೆ ಅವರಿಗೆ ನಾನು ಸಂಪರ್ಕ ಮಾಡಲಿಲ್ಲ ಯಾರು ಬಂದರೇನೇ ಬಿಟ್ಟರೇನು ಕಾರ್ಯಕ್ರಮಕ್ಕೆ ಅಪಾರ ಪ್ರಮಾಣದ ಭಕ್ತ ಸಮೂಹ ಬಂದಿರುವುದಕ್ಕೆ ನನಗೆ ತುಂಬಾ ಸಂತೋಷವಾಗಿದೆ ಎಂದರು ಕೊಡಗಾನೂರದ ಮಲ್ಲಿಕಾರ್ಜುನ ಶ್ರೀಗಳು ಮಾತನಾಡಿ ಲಿಂಗೈಕ್ಯ ಚನ್ನಬಸವ ಸ್ವಾಮಿಗಳು ಶ್ರೀ ಮಠದಲ್ಲಿ 12ನೇ ಶತಮಾನದ 63 ಶರಣರ ಅನುಭವ ಮಂಟಪ ನಿರ್ಮಾಣ ಮಾಡುವ ಸಂಕಲ್ಪ ಇಟ್ಟುಕೊಂಡಿದ್ದರು ಈ ಕಾರ್ಯವನ್ನು ಶ್ರೀಮಠದ ಪೀಠಾಧ್ಯಕ್ಷರಾದ ಡಾ ಸಿದ್ದಲಿಂಗ ಮಹಾಸ್ವಾಮಿಗಳು ನೆರವೇರಿಸುತ್ತಾರೆ ಅವರಿಗೆ ನಾವು ಬೆನ್ನೆಲುಬುವಾಗಿ ಕೆಲಸ ಮಾಡುತ್ತೇವೆ ಎಂದು ಮಾತನಾಡಿದರು ಧರ್ಮಸಭಾ ಸಮಾರಂಭದಲ್ಲಿ ಗುಳೇದಗುಡ್ಡದ ಕಾಶಿನಾಥ ಸ್ವಾಮಿಗಳು ಮಸಬಿನಾಳದ ದಾಸೋಹ ಮಠದ ಶ್ರೀ ಸಿದ್ದರಾಮ ಸ್ವಾಮೀಜಿ ಚಡಚಣದ ಷಡಕ್ಷರ ಸ್ವಾಮೀಜಿ ಅಥನಿ ಗಚ್ಚಿನ ಮಠದ ಶಿವಬಸವ ಸ್ವಾಮೀಜಿ ಹೂವಿನ ಹಿಪ್ಪರಗಿ ಪತ್ರಿ ಮಠದ ದ್ರಾಕ್ಷಾಯಿಣಿ ಮಾತಾಜಿ ಶಿವಪುರ ಮಠದ ಶಿವಲಿಂಗೇಶ್ವರ ಸ್ವಾಮೀಜಿ ಹೊನವಾಡದ ಶರಣರಾದ ಬಾಬುರಾವ್ ಮಹಾರಾಜರು ಕೊಡೆಕಲ್ಲದ ಶರಣಮ್ಮ ನವರು ಅಥರ್ಗಾ ಸ್ವಾಮೀಜಿ ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಶ್ರೀ ಹಾಸಿಮ್ ಪೀರ್ ವಾಲಿಕಾರ್ ಮಮತಾ ಮುಳ್ಳ ಸಾವಳಗಿ ಶಶಿಕಲಾ ನಾಯ್ಕೋಡಿ ಉಪಸ್ಥಿತರಿದ್ದರು ನಂತರ ಬೆಂಗಳೂರಿನ ಸಿತಾರವಾದಕರಾದ ಶ್ರೀಮತಿ ಶ್ರೀಲತಾ ಅವರಿಂದ ವಚನ ಸಂಗೀತೋತ್ಸವ ಜರಗಿತು ಬೆಳಿಗ್ಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಆನೆ ಅಂಬಾರಿ ಕುದುರೆ ಕುಂಭಮೇಳ ಸಕಲ ವಾದ್ಯಗಳಿಂದ ಪಲ್ಲಕ್ಕಿ ಉತ್ಸವ ಜರುಗಿತು ಈ ಕಾರ್ಯಕ್ರಮದ ಪ್ರಾರ್ಥನ ಗೀತೆಯನ್ನು ಶ್ರೀಮತಿ ಶಶಿಕಲಾ ನಾಯ್ಕೋಡಿ ಅವರು ನಡೆಸಿಕೊಟ್ಟರು ಕಾರ್ಯಕ್ರಮ ಸ್ವಾಗತವನ್ನು ಕನ್ನಡ ಸಾಹಿತ್ಯ ಜಿಲ್ಲಾಧ್ಯಕ್ಷರಾದ ಹಾಸಿಂಪಿರ್ ವಾಲಿಕಾರ್ ಕಾರ್ಯಕ್ರಮ ನಿರೂಪಣೆಯನ್ನು ನಿವೃತ್ತಿ ಶಿಕ್ಷಕರಾದ ಶ್ರೀ ಎಸ್ ಎಲ್ ಓಂಕಾರ್ ಕಾರ್ಯಕ್ರಮ ವಂದನಾರ್ಪಣೆಯನ್ನು ಶ್ರೀಮತಿ ಗಿರಿಜಾ ಸಜ್ಜನ್ ಗುರುಮಾತೆಯರು ನೆರವೇರಿಸಿದರು ಜಾತ್ರೋತ್ಸವದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಕನ್ನಡ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತು ಇವರ ಸಂಯೋಗದಲ್ಲಿ ಕವನ ವಾಚನ ನಡೆಯಿತು ನಂತರ ಜನಪದ ಜಾತ್ರೆ ಜರುಗಿತು

# ಉತ್ತಮ ಶಿಕ್ಷಣದಿಂದ ಮಾತ್ರ ಉತ್ತಮ ಮಾರ್ಗದರ್ಶಕರು ರೂಪುಗೊಳ್ಳಲು ಸಾಧ್ಯ: ಶಾಸಕ ಡಾ.ಎನ್.ಟಿ. ಶ್ರೀನಿವಾಸ್

**ಹೊಸಪೇಟೆ.ಜೂ.24** ನಮ್ಮ ಸಮಾಜದ ಬೆನ್ನೆಲುಬಾಗಿರುವ ದುಡಿಯುವ ವರ್ಗಗಳ ತಾಯಂದಿರ, ಮಹಿಳೆಯರ ಜೀವನವನ್ನು ತೆರೆದ ಪುಸ್ತಕದಂತೆ ತೋರಿಸುವ 12 ಪುಸ್ತಕಗಳನ್ನು ನಮ್ಮ ಜಿಲ್ಲೆಯ ಕನ್ನಡ ವಿಶ್ವವಿದ್ಯಾಲಯವು ಬಿಡುಗಡೆ ಮಾಡಿರುವುದು ಹೆಮ್ಮೆಯ ವಿಷಯ. ಇಂತಹ ದುಡಿಯುವ ವರ್ಗದ ಮಹಿಳೆಯರನ್ನು ನಾವು ಪ್ರತಿದಿನ ಸಂಪರ್ಕಿಸುತ್ತೇವೆ. ಎಷ್ಟೇ ರಾಜಕೀಯ ಒತ್ತಡವಿದ್ದರೂ ಇಂಥವರ ಸಮಸ್ಯೆಗಳಿಗೆ ಸ್ಪಂದಿಸಿ ಆ ನಿಟ್ಟಿನಲ್ಲಿ ಕೆಲಸ ಮಾಡುವುದು ಒಳ್ಳೆಯ ಶಿಕ್ಷಣ ಹಾಗೂ ಒಳ್ಳೆಯ ಮಾರ್ಗದರ್ಶಕರ ಸಲಹೆಗಳಿಂದ ಸಾಧ್ಯವಾಗುತ್ತದೆ. ಉತ್ತಮ ಶಿಕ್ಷಣದಿಂದ ಉತ್ತಮ ಮಾರ್ಗದರ್ಶಕರು ರೂಪುಗೊಳ್ಳಲು ಸಾಧ್ಯ ಎಂದು ಕೂಡ್ಲಿಗಿ ಶಾಸಕ ಡಾ ಎನ್.ಟಿ. ಶ್ರೀನಿವಾಸ್ ಹೇಳಿದರು.



ಹಂಪಿ ಕನ್ನಡ ವಿಶ್ವವಿದ್ಯಾಲದ ಭುವನ ವಿಜಯ ಸಭಾಂಗಣದಲ್ಲಿ ಒನಕೆ ಓಬವ್ವ ಅಧ್ಯಯನ ಪೀಠದ ವತಿಯಿಂದ ಮಂಗಳವಾರ ಆಯೋಜಿಸಲಾಗಿದ್ದ ಬದುಕಿನ ಬೆಂಕಿಯಲ್ಲಿ ಬೆಂದವರ ಚರಿತೆ-12 ಪುಸ್ತಕಗಳ ಬಿಡುಗಡೆ ಸಮಾರಂಭದಲ್ಲಿ, 12 ಪುಸ್ತಕಗಳನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು, ಪ್ರತಿಯೊಂದು ಸಾಮಾಜಿಕ ಪಿಡುಗನ್ನು ಹೊಡೆದೊಡಿಸಲು ಶಿಕ್ಷಣದಿಂದ ಮಾತ್ರ ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಕನ್ನಡ ವಿಶ್ವವಿದ್ಯಾಲಯವು ನಮ್ಮ ಜಿಲ್ಲೆಗೆ ಉತ್ತಮ ಸಂಶೋಧಕರನ್ನು ಕೊಟ್ಟಿರುವುದು ಹೆಮ್ಮೆಯ ವಿಷಯ. ವಾಲ್ಮೀಕಿ ಅಧ್ಯಯನ ಪೀಠ, ಒನಕೆ ಓಬವ್ವ ಪೀಠ, ದಲಿತ ಅಧ್ಯಯನ ಪೀಠ, ಮುಂತಾದ ಪೀಠಗಳ ವತಿಯಿಂದ ಶೋಷಿತ ವರ್ಗಕ್ಕೆ ತಿಳುವಳಿಕೆ ನೀಡುವ, ಉನ್ನತ ಶಿಕ್ಷಣ ನೀಡುವ, ಉತ್ತಮ ಸಂಶೋಧಕರನ್ನು, ಮಾರ್ಗದರ್ಶಕರನ್ನು ರೂಪಿಸುವ ಕೆಲಸವನ್ನು ಕನ್ನಡ ವಿಶ್ವವಿದ್ಯಾಲಯವು ಮಾಡುತ್ತಿದೆ. ಅನೇಕ ಬುಡಕಟ್ಟುಗಳಿಗೆ ಸೇರಿದ ವಿದ್ಯಾರ್ಥಿಗಳು ಶೋಷಿತ ಸಮುದಾಯಗಳ ಕುರಿತು ಇಲ್ಲಿ ಸಂಶೋಧನೆ ಮಾಡುತ್ತಿದ್ದಾರೆ. ಇಂತಹ ವಿಶ್ವವಿದ್ಯಾಲಯಕ್ಕೆ ಸಂಶೋಧನೆಗೆ ಬೇಕಾದ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದರು.

ಕೂಡ್ಲಿಗಿ ತಾಲ್ಲೂಕಿನ ಮಹಿಳೆಯಾದ ಓಬವ್ವಳ ನೆನಪಿಗಾಗಿ ಹೊರತಂದಿರುವ ಎಲ್ಲ ಪುಸ್ತಕಗಳು ಶೋಷಿತರ, ಬಡಮಹಿಳೆಯರ ಸಮಸ್ಯೆಗಳನ್ನು ಬಿಂಬಿಸುತ್ತವೆ. ಈ ಪುಸ್ತಕಗಳನ್ನು ಓದಿ ಅವರ ಬದುಕಿಗೆ ಆಧಾರವಾಗುವ ನಿಟ್ಟಿನಲ್ಲಿ ಕೆಲಸ ಮಾಡಬೇಕಾಗಿದೆ. ಇದರ ಸಾಧಕ ಬಾಧಕಗಳನ್ನು ಚರ್ಚಿಸಿ ಅವರ ಬಾಳಿಗೆ ಬೆಳಕಾಗುವ ನಿಟ್ಟಿನಲ್ಲಿ ನಾವೆಲ್ಲ ಪ್ರಯತ್ನಿಸೋಣ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕುಲಪತಿ ಡಾ.ಡಿ.ವಿ ಪರಮಶಿವಮೂರ್ತಿ ಮಾತನಾಡಿ, ಬದುಕಿನ ಬೆಂಕಿಯಲ್ಲಿ ಬೆಂದವರ ಚರಿತೆ ಎನ್ನುವ ತಲೆಬರಹದ ಅಡಿಯಲ್ಲಿ 12 ಪುಸ್ತಕಗಳು ಒನಕೆ ಓಬವ್ವ ಅಧ್ಯಯನ ಪೀಠದಿಂದ ಬಿಡುಗಡೆಗೊಂಡಿವೆ. ನಮ್ಮ ದೇಶವು ಸ್ವಾತಂತ್ರ್ಯ ಬಂದು ಇಷ್ಟು ವರ್ಷಗಳಾದರೂ ಸಮಾಜದ ಆಳಕ್ಕೆ ಇಳಿದು ನೋಡಿದಾಗ ಮಹಿಳಾ ವಲಯ ಇನ್ನೂ ಅನೇಕ ಕ್ಷೇತ್ರಗಳಲ್ಲಿ ಶೋಷಣೆಗೆ ಒಳಗಾಗುತ್ತಿರುವುದನ್ನು ನಾವು ಕಾಣುತ್ತಿದ್ದೇವೆ. ಹೀಗೆ ಶೋಷಣೆಗೆ ಒಳಗಾಗುತ್ತಿರುವ, ಬದುಕನ್ನು ದಿಟ್ಟತನದಿಂದ ಎದುರಿಸುತ್ತಿರುವ, ಬದುಕಿನ ಹಾದಿಯಲ್ಲಿ ಬೆಂಕಿಯ ಮೇಲೆ ನಡೆದುಕೊಂಡು ಬಂದಂತಹ ಅನೇಕ ಮಹಿಳಾ ಗುಂಪುಗಳು ಇನ್ನೂ ಕೂಡ ನಮ್ಮ ನಡುವೆ ಇವೆ. ಇಂತಹ ಮಹಿಳೆಯರನ್ನು ಕೇಂದ್ರವಾಗಿರಿಸಿಕೊಂಡು ಮಹಿಳೆಯರ ಬಗ್ಗೆ ಕೃತಿಗಳನ್ನು ರಚಿಸಿ ಅವರ ಮೇಲೆ ಬೆಳಕನ್ನು ಚೆಲ್ಲುವಂತಹ ಕೆಲಸವನ್ನು ಒನಕೆ ಓಬವ್ವ ಪೀಠ ಕೈಗೊಂಡಿದೆ.

ಬೀದಿ ಬದಿ ವ್ಯಾಪಾರ ಕ್ಷೇತ್ರದಲ್ಲಿ, ಗಾರ್ಮೆಂಟ್ಸ್‌ಗಳಲ್ಲಿ ಸಾವಿರಾರು ಮಹಿಳೆಯರು ಕೆಲಸ ಮಾಡುತ್ತಾರೆ. ಗುಡಿಕೈಗಾರಿಕೆ, ಬುಡಕಟ್ಟು ಸಮುದಾಯಗಳು, ಪೌರಕಾರ್ಮಿಕರು, ಪತ್ರಿಕೋದ್ಯಮ ಉದ್ಯೋಗಿಗಳು, ಮೀನುಗಾರಿಕೆ, ಕೃಷಿವಲಯದ ಕೂಲಿಕಾರ್ಮಿಕರು ಈ ಎಲ್ಲ ಕ್ಷೇತ್ರದ ಕೆಲಸಗಳಲ್ಲಿ ಮಹಿಳೆಯರ ಪಾತ್ರ ಬಹಳ ಮುಖ್ಯ. ಇವರಲ್ಲಿ ಅನೇಕರಿಗೆ ಸ್ವಂತ ಮನೆ, ಭೂಮಿ ಇಲ್ಲ. ಇಂತಹ ಮಹಿಳೆ ಆ ಕುಟುಂಬದಲ್ಲಿ ಎಷ್ಟು ನಿರ್ಲಕ್ಷ್ಯಕ್ಕೆ ಒಳಗಾಗಿದ್ದಾಳೆ, ಎಷ್ಟು ನೋವನ್ನು ಅನುಭವಿಸುತ್ತಿದ್ದಾಳೆ ಎನ್ನುವುದನ್ನು ನಾವು ಗಮನಿಸಬೇಕಾಗಿದೆ. ಇಂತಹ ಸಮುದಾಯಗಳ ನೋವುಗಳನ್ನು ಆಲಿಸುವ ಕಿವಿ ನಮಗಿರಬೇಕಾಗಿದೆ. ಹೀಗಾಗಿ ಒನಕೆ ಓಬವ್ವ ಪೀಠದಿಂದ ಇಂತಹ ಕೃತಿಗಳನ್ನು ಹೊರತಂದಿರುವ ಮಹತ್ವದ ಕೆಲಸವು ಶ್ಲಾಘನೀಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಒನಕೆ ಓಬವ್ವ ಅಧ್ಯಯನ ಪೀಠದ ಸಂಚಾಲಕ ಮತ್ತು ಹಿರಿಯ ಪ್ರಾಧ್ಯಾಪಕ ಡಾ ಎನ್ ಚಿನ್ನಸ್ವಾಮಿ ಸೋಸಲೆ, ಕುಲಸಚಿವ ಡಾ ವಿರೂಪಾಕ್ಷಿ ಪೂಜಾರಹಳ್ಳಿ, ಪ್ರಸಾರಾಂಗದ ನಿರ್ದೇಶಕ ಡಾ.ಪಿ.ಮಹಾದೇವಯ್ಯ ಸೇರಿದಂತೆ ವಿವಿಧ ವಿಭಾಗಗಳ ಡೀನರು, ಬೋಧಕ ಹಾಗೂ ಆಡಳಿತ ಸಿಬ್ಬಂದಿಗಳು, ಸಂಶೋಧನಾ ವಿದ್ಯಾರ್ಥಿಗಳು ಹಾಗೂ ವಿವಿಧ ಭಾಗಗಳಿಂದ ಆಗಮಿಸಿದ್ದ ಸಂಘ ಸಂಸ್ಥೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಬಿಡುಗಡೆಗೊಂಡ ಪುಸ್ತಕಗಳು: ಬೀದಿಬದಿ ವ್ಯಾಪಾರ ಕ್ಷೇತ್ರದಲ್ಲಿ ಮಹಿಳೆಯರು, ಗಾರ್ಮೆಂಟ್ಸ್ ಕ್ಷೇತ್ರದಲ್ಲಿ ಮಹಿಳೆಯರು, ಮೀನುಗಾರಿಕೆ ಕ್ಷೇತ್ರದಲ್ಲಿ ಮಹಿಳೆಯರು, ಅಲೆಮಾರಿ ಮಹಿಳೆಯರು, ದುಡಿಯುವ ಮಹಿಳೆಯರು, ಕೃಷಿ ಕೂಲಿಕಾರ್ಮಿಕರ ಮಹಿಳೆಯರು, ಗುಡಿ ಕೈಗಾರಿಕೆಯಲ್ಲಿ ಮಹಿಳೆಯರು, ಬುಡಕಟ್ಟು ಸಮುದಾಯದ ಮಹಿಳೆಯರು, ಪತ್ರಿಕೋದ್ಯಮ ಕ್ಷೇತ್ರದಲ್ಲಿ ಮಹಿಳೆಯರು, ಪೌರಕಾರ್ಮಿಕ ಮಹಿಳೆಯರು, ಕೊರಗ ಸಮುದಾಯದ ಮಹಿಳೆಯರು, ಮನೆ-ಮಾಲ್ಗಳಲ್ಲಿ ದುಡಿಯುವ ಮಹಿಳೆಯರು ಪುಸ್ತಕಗಳು ಬಿಡುಗಡೆ ಮಾಡಲಾಯಿತು.

## ಅಬಕಾರಿ ಹೆಚ್ಚುವರಿ ಆಯುಕ್ತ ವೈ.ಮಂಜುನಾಥ ನಿವಾಸದ ಮೇಲೆ ಇಡಿ ದಾಳಿ

**ಹೊಸಪೇಟೆ.ಜೂ.24–** ಅಬಕಾರಿ ಇಲಾಖೆಯ ಬೆಳಗಾವಿ ಹೆಚ್ಚುವರಿ ಆಯುಕ್ತ ವೈ.ಮಂಜುನಾಥ ನಿವಾಸದ ಮೇಲೆ ಇಡಿ ಅಧಿಕಾರಿಗಳು ಇಂದು ಬೆಳಿಗ್ಗೆ ದಾಳಿ ನಡೆಸಿದ್ದಾರೆ.

ಲೊಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರ ಅಳಿಯ ಹಾಗೂ ಮಾಜಿ ಸಂಸದ ವೈ.ದೇವೇಂದ್ರಪ್ಪ ಅವರ ಪುತ್ರರಾಗಿರುವ ಬೆಳಗಾವಿ ಅಬಕಾರಿ ಹೆಚ್ಚುವರಿ ಆಯುಕ್ತ ವೈ.ಮಂಜುನಾಥ ಅವರ ವಿಜಯನಗರ ಜಿಲ್ಲೆ ಹರಪನಹಳ್ಳಿ ತಾಲೂಕಿನ ಅರಸೀಕೆರೆ ಗ್ರಾಮದಲ್ಲಿರುವ ಅವರ ನಿವಾಸದ ಮೇಲೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಬೆಳ್ಳಂ ಬೆಳಿಗ್ಗೆ ದಾಳಿ ನಡೆಸಿದ್ದಾರೆ.

ಬೆಳಗಿನ ಜಾವ 5-30 ರ ಸುಮಾರಿಗೆ ಎರಡು ಕಾರುಗಳಲ್ಲಿ ಬಂದಿರುವ ಇಡಿ ಅಧಿಕಾರಿಗಳ ತಂಡ ಹರಪನಹಳ್ಳಿ ತಾಲೂಕಿನ ಅರಸೀಕೆರೆ ಗ್ರಾಮದ ವೈ.ಮಂಜುನಾಥ ಅವರ ನಿವಾಸದ ಮೇಲೆ ದಾಳಿ ನಡೆಸಿ, ದಾಖಲೆಗಳ ಪರಿಶೀಲನೆ ನಡೆಸಿದ್ದಾರೆ.



ವಿಜಯನಗರ ಜಿಲ್ಲೆ ಹರಪನಹಳ್ಳಿ ತಾಲೂಕಿನ ಅರಸೀಕೆರೆ ಗ್ರಾಮದಲ್ಲಿನ ನಿವಾಸ ಸೇರಿದಂತೆ ಬೆಳಗಾವಿ, ಬೆಂಗಳೂರು, ಮೈಸೂರು ನಲ್ಲಿರುವ ನಿವಾಸದ ಮೇಲೆ ಇಡಿ ಅಧಿಕಾರಿಗಳು ಏಕಕಾಲದಲ್ಲಿ ದಾಳಿ ನಡೆಸಿದ್ದಾರೆ ಎನ್ನಲಾಗಿದೆ.

# ಶಿಕ್ಷಣದಿಂದ ಮಾತ್ರ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ಸಾಧ್ಯ: ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರ



**ಯಾದಗಿರಿ:ಜೂ.24:** ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಮಕ್ಕಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಣವೇ ಪ್ರಮುಖ ಅಸ್ತ್ರವಾಗಿದೆ. ನಗರ ಹಾಗೂ ಗ್ರಾಮೀಣ ಭಾಗದ ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಲು ಆದ್ಯತೆ ನೀಡಬೇಕು. ಶಿಕ್ಷಣದಿಂದ ಮಾತ್ರ ಜೀವನದ ಹಲವು ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಸಾಧ್ಯ ಎಂದು ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರ ಹೇಳಿದರು.

ನಗರದ ವಾಲ್ಮೀಕಿ ನಗರದಲ್ಲಿ ಲೋಕೋಪಯೋಗಿ ಇಲಾಖೆಯ ವತಿಯಿಂದ 54 ಲಕ್ಷ ರೂ. ವೆಚ್ಚದಲ್ಲಿ ನಿರ್ಮಾಣಗೊಂಡಿರುವ ಮಶೇಮ್ಮ ಗುಡಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ನಾಲ್ಕು ಕೊಠಡಿಗಳ ನೂತನ ಶಾಲಾ ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿದರು

ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ಶೈಕ್ಷಣಿಕ ಪ್ರಗತಿಗಾಗಿ ಹಲವು ಮಹತ್ವದ ಯೋಜನೆಗಳನ್ನು ಜಾರಿಗೆ ತಂದಿವೆ. ಬಡ ಹಾಗೂ ಹಿಂದುಳಿದ ವರ್ಗದ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಅಗತ್ಯವಿರುವ ಪ್ರದೇಶಗಳಲ್ಲಿ ಶಾಲೆಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ ಎಂದು ಹೇಳಿದರು.

ಈ ಶಾಲೆಯಲ್ಲಿ ಈಗಾಗಲೇ ಶೌಚಾಲಯ ನಿರ್ಮಾಣ ಹಾಗೂ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪನೆ ಮಾಡಲಾಗಿದೆ. ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಶೀಘ್ರದಲ್ಲೇ ಕಂಪೌಂಡ್ ನಿರ್ಮಾಣ ಹಾಗೂ ಆಟದ ಮೈದಾನ ಅಭಿವೃದ್ಧಿಗೆ ಅಗತ್ಯ ಅನುದಾನ ಒದಗಿಸಲಾಗುವುದು ಎಂದು ಭರವಸೆ ನೀಡಿದರು.

ವಾಲ್ಮೀಕಿ ನಗರದ ಸುತ್ತಮುತ್ತಲಿನ ಪ್ರದೇಶದಲ್ಲಿ ಸ್ವಚ್ಛತೆಯ ಕೊರತೆ ಕಂಡುಬರುತ್ತಿದ್ದು, ಸಾರ್ವಜನಿಕರು ತಮ್ಮ ಮನೆ ಹಾಗೂ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಲು ಹೆಚ್ಚಿನ ಕಾಳಜಿ ವಹಿಸಬೇಕು. ಶಾಲಾ ಆವರಣದಲ್ಲಿ ವಿವಿಧ ಸಸಿಗಳನ್ನು ನೆಟ್ಟು ಹಸಿರು ವಾತಾವರಣ ನಿರ್ಮಿಸಬೇಕು. ಉತ್ತಮ ಪರಿಸರವು ಮಕ್ಕಳ ಕಲಿಕೆಯ ಮೇಲೆ ಸಕಾರಾತ್ಮಕ ಪರಿಣಾಮ ಬೀರುತ್ತದೆ ಎಂದು ಸಲಹೆ ನೀಡಿದರು.

ಈ ಭಾಗದ ಜನರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ದಾಖಲಿಸಬೇಕು. ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾದಾಗ ಶಾಲೆಯ ಅಭಿವೃದ್ಧಿಗೂ ಸಹಕಾರಿಯಾಗುತ್ತದೆ ಎಂದರು.

ಕ್ಷೇತ್ರದ ಎಲ್ಲಾ ವರ್ಗದ ಜನರಿಗೆ ಅಗತ್ಯ ಮೂಲಭೂತ ಸೌಕರ್ಯ ಕಲ್ಪಿಸಲು ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದೇನೆ. ಅಭಿವೃದ್ಧಿ ವಿಚಾರದಲ್ಲಿ ಯಾವುದೇ ರಾಜಕೀಯ ಮಾಡುವುದಿಲ್ಲ. ಕ್ಷೇತ್ರದ ಶಾಂತಿ, ಸಾಮರಸ್ಯ ಹಾಗೂ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಿ ಕಾರ್ಯನಿರ್ವಹಿಸುತ್ತಿದ್ದೇನೆ ಎಂದು ಶಾಸಕ ತುನ್ನೂರ ತಿಳಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ವೀರಪ್ಪ ಕಾನಳ್ಳಿ ಮಾತನಾಡಿ, ನೂತನ ಶಾಲೆಗೆ ಅಗತ್ಯ ಶಿಕ್ಷಕರು ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ನಗರಸಭೆ ಮಾಜಿ ಸದಸ್ಯ ಹಣಮಂತ ನಾಯಕ ಮಾತನಾಡಿ, ಈ ಭಾಗದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಬಡ ಕುಟುಂಬಗಳು ವಾಸಿಸುತ್ತಿದ್ದು, ಮಕ್ಕಳಿಗೆ ಉತ್ತಮ ಶಿಕ್ಷಣ ಸಿಗಬೇಕು ಎಂಬ ಉದ್ದೇಶದಿಂದ ಶಾಸಕರನ್ನು ಭೇಟಿ ಮಾಡಿದ ಬಳಿಕ ಕೇವಲ ಎರಡು ತಿಂಗಳಲ್ಲೇ ಅನುದಾನ ಬಿಡುಗಡೆ ಮಾಡಿ ಕಾಮಗಾರಿ ಆರಂಭಿಸಲಾಯಿತು. ಇಂದು ಸ್ಥಳೀಯರ ಬಹುದಿನಗಳ ಕನಸು ನನಸಾಗಿದೆ ಎಂದು ಹೇಳಿದರು.

ನಾಯಕ ಸಮಾಜದ ಯುವ ಮುಖಂಡ ನರಸಪ್ಪ ಬುಡ್ಡಯ್ಯನೋರ ಮಾತನಾಡಿ, ಈ ಭಾಗದಲ್ಲಿ ಶಾಲೆ ನಿರ್ಮಾಣಕ್ಕಾಗಿ ಹಿರಿಯರು ಹಾಗೂ ಯುವಕರು ಕಳೆದ 20 ವರ್ಷಗಳಿಂದ ಹೋರಾಟ ನಡೆಸುತ್ತ ಬಂದಿದ್ದು, ಇದೀಗ ಅದು ಸಾರ್ಥಕವಾಗಿದೆ. ಉಳಿದಿರುವ ಸಣ್ಣಪುಟ್ಟ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸುವಂತೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ದಂಡಗುಂಡ ಬಸವಣ್ಣ ದೇವಸ್ಥಾನದ ಅರ್ಚಕರಾದ ಸಿದ್ದಯ್ಯಸ್ವಾಮಿ ಹಿರೇಮಠ, ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಕೈಲಾಸ್, ಇಂಜಿನಿಯರ್ ಪ್ರಭಾಕರ, ಶಿಕ್ಷಣ ಇಲಾಖೆಯ ಶರಣಗೌಡ ಪಾಟೀಲ್, ಮಲ್ಲಪ್ಪ, ಮುಖಂಡರಾದ ಬಸವರಾಜಪ್ಪ ಬುಡ್ಡಯ್ಯನೋರ, ವಿಜಯಲಕ್ಷ್ಮಿ ಕೃಷ್ಣಾ ನಾನೇಕಾರ, ಮುಖ್ಯ ಶಿಕ್ಷಕಿ ಸುರೇಖಾ ಪಂಚಾಳ, ರೇಣುಕಾ ಮೋನಪ್ಪ ಹಳಿಗೇರ, ವಿಶ್ವನಾಥ ನಾಯಕ, ಹಣಮಂತ ನಿಶಾನಿ, ದೇವಿಂದ್ರಪ್ಪ ಬುಡ್ಡಯ್ಯನೋರ, ಚಂದಪ್ಪ ಅಕ್ಕನೋರ, ನಾಗಪ್ಪ ಪಿಲ್ಲಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಶ್ಯಾಮ್ ಪ್ರಸಾದ್ ಧೀಮಂತ ನಾಯಕ

**ಕೆ.ಆರ್.ಪುರ,ಜೂ.24–**ಬಿಜೆಪಿ ಪಕ್ಷ ವಿಶ್ವದಲ್ಲೆ ಅತಿಹೆಚ್ಚು ಸದಸ್ಯತ್ವ ಹೊಂದಲು ಭದ್ರ ಬುನಾದಿ ಹಾಕಿದವರು ಧೀಮಂತ ನಾಯಕ ಡಾ.ಶ್ಯಾಮ್ ಪ್ರಸಾದ್ ಮುಖರ್ಜಿ ಎಂದು ಕೆ.ಆರ್.ಪುರ ಕ್ಷೇತ್ರದ ಅಧ್ಯಕ್ಷ ಮುನೇಗೌಡ ಅವರು ತಿಳಿಸಿದರು.

ಕ್ಷೇತ್ರದ ಡಾ.ಶ್ಯಾಮ್ ಪ್ರಸಾದ್ ಮುಖರ್ಜಿ ಅವರ ಬಲಿದಾನ ದಿನದ ಅಂಗವಾಗಿ ಅವ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.1951 ರಲ್ಲಿ ಭಾರತೀಯ ಜನಸಂಘವನ್ನು ಸ್ಥಾಪಿಸಿದ ಅವರು ಮುಂದೆ ಭಾರತೀಯ ಜನತಾ ಪಕ್ಷ ಹೆಮ್ಮರವಾಗಿ ಬೆಳೆಯಲು ಕಾರಣರಾಗಿದ್ದಾರೆ ಎಂದು ನುಡಿದರು.

ಡಾ.ಶ್ಯಾಮ್ ಪ್ರಸಾದ್ ಮುಖರ್ಜಿ ಅವರು ರಾಜಕೀಯ ಪಂಡಿತ, ನ್ಯಾಯವಾದಿ ಮತ್ತು ಶಿಕ್ಷಣತಜ್ಞರಾಗಿದ್ದು ನಮ್ಮ ದೇಶದ ಸರ್ವತೋಮುಖ ಬೆಳವಣಿಗೆಗೆ ಭದ್ರ ಅಡಿಪಾಯ ಹಾಕುವ ನಿಟ್ಟಿನಲ್ಲಿ ಮಾಡಿದ ಕಾರ್ಯಗಳು ಸ್ಮರಣೀಯ ಎಂದು ನುಡಿದರು.ಬಿಜೆಪಿ ಪಕ್ಷ ದೇಶದಲ್ಲಿ ಉತ್ತಮ ಆಡಳಿತ ನೀಡಲು ಇವರು ನೀಡಿರುವ ಕೊಡುಗೆ ಮೂಲ ಕಾರಣವಾಗಿದೆ,ಇದರಿಂದಾಗಿಯೇ ನಮ್ಮ ದೇಶ ವಿಶ್ವಗುರು ಆಗಲು ಸಾದ್ಯವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪ್ರಧಾನ ಕಾರ್ಯದರ್ಶಿ ಲೋಕೆಶ್,ಉಪಾಧ್ಯಕ್ಷ ಗಂಗಧರ್, ಮಹಿಳಾ ಅಧ್ಯಕ್ಷೆ ಗೌರಮ್ಮ,ಯುವ ಮೋರ್ಚಾ ಅಧ್ಯಕ್ಷ ಗೋವಿಂದ್ ಯಾದವ್,ವಾರ್ಡನ ಅಧ್ಯಕ್ಷ ಸತೀಶ್,ಮುಖಂಡರಾದ ಧನಕುಮಾರ್, ದೇವರಾಜ,ರವಿ, ಜಗದೀಶ್ ಗೌಡ,ಮುರಳಿ, ಜಯಂತಿ, ಕಿಶನ್, ಸಂಪತ್ ಇದ್ದರು.

# ಮನೆ ಮನೆಗೆ ಶರಣರ ಕೃತಿಗಳು ಅಭಿಯಾನಕ್ಕೆ ಚಾಲನೆ

**ಬೀದರ್:** ವಚನಾಮೃತ ಕನ್ನಡ ಸಂಘವು ಮನೆ ಮನೆಗೆ ಶರಣರ ಕೃತಿಗಳು ಅಭಿಯಾನಕ್ಕೆ ನಗರದಲ್ಲಿ ಮಂಗಳವಾರ ಚಾಲನೆ ನೀಡಿತು.

ಸಂಘದ ಅಧ್ಯಕ್ಷ ಪ್ರೊ. ಸಿದ್ರಾಮಪ್ಪ ಮಾಸಿಮಾಡೆ ಅವರು ಮಹೇಶ ಮಜಗೆ ಹಾಗೂ ಶಿಲ್ಪಾ ಮಜಗೆ ದಂಪತಿಗೆ ಶರಣರ ಕೃತಿಗಳನ್ನು ನೀಡುವ ಮೂಲಕ ಅಭಿಯಾನಕ್ಕೆ ಚಾಲನೆ ಕೊಟ್ಟರು.

ವಚನಾಮೃತ ಕನ್ನಡ ಸಂಘವು ಮನುಕುಲಕ್ಕೆ ಮಾರ್ಗದರ್ಶಿ ಆಗಿರುವ ಬಸವಾದಿ ಶರಣರ ವಚನ ಸಾಹಿತ್ಯದ ಮೇಲೆ ಬೆಳಕು ಚೆಲ್ಲುವ ಕಾರ್ಯ ಮಾಡುತ್ತಿದೆ. ಶರಣರ ಜೀವನ, ತತ್ವಗಳ ಪ್ರಚಾರ ಹಾಗೂ ಪ್ರಸಾರಕ್ಕಾಗಿ ಇದೀಗ ಮನೆ ಮನೆಗೆ ಶರಣರ ಕೃತಿಗಳು ಅಭಿಯಾನ ಹಮ್ಮಿಕೊಂಡಿದೆ ಎಂದು ಅವರು ತಿಳಿಸಿದರು.

ಮೊದಲ ಹಂತದಲ್ಲಿ ನಗರ, ಬೀದರ್ ತಾಲ್ಲೂಕು ಹಾಗೂ ಎರಡನೇ ಹಂತದಲ್ಲಿ ಜಿಲ್ಲೆಯ ಇತರ ಪ್ರದೇಶಗಳ ಮನೆ ಮನೆಗೆ ಶರಣರ ಕುರಿತ ವಿವಿಧ ಕೃತಿಗಳನ್ನು ತಲುಪಿಸಲು ಯೋಜಿಸಲಾಗಿದೆ ಎಂದು ಹೇಳಿದರು.

ಅಭಿಯಾನವು ಜನರಲ್ಲಿ ಪುಸ್ತಕ ಓದುವ ಹವ್ಯಾಸ ಬೆಳೆಸಲಿದೆ. ಸುಸಂಸ್ಕೃತ ಸಮಾಜ ನಿರ್ಮಿಸಲು ನೆರವಾಗಲಿದೆ ಎಂದು ತಿಳಿಸಿದರು.



ಪ್ರಮುಖರಾದ ಶ್ರೀಕಾಂತ ಬಿರಾದಾರ, ಕಲ್ಯಾಣರಾವ್ ಹೊಸಖಂಡೆ, ಬಸವರಾಜ ಬಿರಾದಾರ ಮತ್ತಿತರರು ಇದ್ದರು.

# ದೈಹಿಕ ಸದೃಢತೆ, ಮಾನಸಿಕ ಆರೋಗ್ಯ, ಆರೋಗ್ಯಕರ ಜೀವನಶೈಲಿಯನ್ನು ಕಾಪಾಡಿಕೊಳ್ಳುವಲ್ಲಿ ಯೋಗ ಪ್ರಮುಖ



**ಬೀದರ್, ಜೂ 24:** ದೈಹಿಕ ಸದೃಢತೆ, ಮಾನಸಿಕ ಆರೋಗ್ಯ ಹಾಗೂ ಆರೋಗ್ಯಕರ ಜೀವನಶೈಲಿಯನ್ನು ಕಾಪಾಡಿಕೊಳ್ಳುವಲ್ಲಿ ಯೋಗದ ಪಾತ್ರವನ್ನು ವಿವರಿಸಲಾಯಿತು ಎಂದು ಬೀದರ ಎನ್‌ಸಿಸಿ ಕರ್ನಾಟಕ ಏರ್ ಸ್ಕ್ಮಾಡನ್ (ಟೆಕ್) ಪ್ರದೀಪ್ ಸಿಂಗ್ ಅವರು ಹೇಳಿದರು.

ಬೀದರ ನಗರದ ಕೋಟೆ ಆವರಣದಲ್ಲಿ ಬೀದರ ಕರ್ನಾಟಕ ಏರ್ ಸ್ಕ್ಮಾಡನ್ (ಟೆಕ್) ಎನ್‌ಸಿಸಿ, ವತಿಯಿಂದ ಇತ್ತೀಚಿನ 12ನೇ ಅಂತರರಾಷ್ಟ್ರೀಯ ಯೋಗ ದಿನವನ್ನು ಅತ್ಯಂತ ಉತ್ಸಾಹ ಹಾಗೂ ಸಂಭ್ರಮದಿಂದ ಆಚರಿಸಲಾಯಿತು ಅವರು ಮಾತನಾಡಿದರು.

ದೈಹಿಕ ಸದೃಢತೆ, ಮಾನಸಿಕ ಆರೋಗ್ಯ ಹಾಗೂ ಆರೋಗ್ಯಕರ ಜೀವನಶೈಲಿಯನ್ನು ಕಾಪಾಡಿಕೊಳ್ಳುವಲ್ಲಿ ಯೋಗದ ಪಾತ್ರವನ್ನು ವಿವರಿಸಲಾಯಿತು. ಬಳಿಕ ನಡೆದ ಯೋಗಾಭ್ಯಾಸದಲ್ಲಿ ಕೆಡೆಟ್‌ಗಳು ವಿವಿಧ ಯೋಗಾಸನಗಳು, ಪ್ರಾಣಾಯಾಮ ಹಾಗೂ ಧ್ಯಾನಾಭ್ಯಾಸಗಳನ್ನು ನಡೆಸಿ, ಯೋಗವನ್ನು ಪ್ರತಿದಿನದ ಜೀವನದಲ್ಲಿ ಅಳವಡಿಸಿಕೊಳ್ಳುವ ಅಗತ್ಯತೆಯನ್ನು ಪ್ರತಿಪಾದಿಸಿದರು.

ಯೋಗಾಭ್ಯಾಸದ ನಂತರ ಸಾರ್ವಜನಿಕರಲ್ಲಿ ಯೋಗದ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಭವ್ಯ ಜಾಗೃತಿ ರ್‍ಯಾಲಿಯನ್ನು ಆಯೋಜಿಸಲಾಯಿತು. ಈ ರ್‍ಯಾಲಿಯು ಬೀದರ್ ಕೋಟೆಯಿಂದ ಆರಂಭವಾಗಿ ಶಾಜ್ ಗಂಜ್ ದರ್ವಾಜಾ, ಅಂಬೇಡ್ಕರ್ ವೃತ್ತ, ಸಿದ್ಧಾರ್ಥ ಕಾಲೇಜು ಮಾರ್ಗವಾಗಿ ಸಂಚರಿಸಿ, ಮತ್ತೆ ಎನ್ ಸಿ ಘಟಕಕ್ಕೆ ಮರಳಿತು. ಈ ಜಾಗೃತಿ ರ್‍ಯಾಲಿಯ ಉದ್ದೇಶ ನಾಗರಿಕರಲ್ಲಿ ಹಾಗೂ ವಿಶೇಷವಾಗಿ ಯುವಜನರಲ್ಲಿ ಯೋಗದ ಮಹತ್ವವನ್ನು ಅರಿವು ಮೂಡಿಸಿ, ಶಿಸ್ತುಬದ್ಧ ಹಾಗೂ ಆರೋಗ್ಯಕರ ಜೀವನಕ್ಕಾಗಿ ಯೋಗವನ್ನು ಅಳವಡಿಸಿಕೊಳ್ಳುವಂತೆ ಪ್ರೇರೇಪಿಸುವುದಾಗಿತ್ತು.

ಕರ್ನಾಟಕ ಏರ್ ಸ್ಕ್ಯಾಡ್ರನ್ (ಟೆಕ್) ಎನ್‌ಸಿಸಿ ತಂಡವು ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ, ಹೊಸಪೇಟೆ ವಲಯ ಹಾಗೂ ಬೀದರ್ ಸಂಚಾರ ಪೊಲೀಸ್ ಇಲಾಖೆಯ ಸಹಯೋಗದಲ್ಲಿ ಯಶಸ್ವಿಯಾಗಿ ಆಯೋಜಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಎನ್ ಸಿಸಿ ಅಧಿಕಾರಿ, ಅಸೋಸಿಯೇಟ್ ಎನ್‌ಸಿಸಿ ಅಧಿಕಾರಿಗಳು (ಎಎನ್‌ಓಗಳು), ಎನ್‌ಸಿಸಿ ಸಿಬ್ಬಂದಿ ಹಾಗೂ ಸುಮಾರು 250 ಎನ್‌ಸಿಸಿ ಕೆಡೆಟ್ ಗಳು ಉತ್ಸಾಹದಿಂದ ಭಾಗವಹಿಸಿದರು.

ಈ ಸಂದರ್ಭದಲ್ಲಿ 3 ಕರ್ನಾಟಕ ಏರ್ ಸ್ಕ್ಯಾಡ್ರನ್ (ಟೆಕ್) ಎನ್‌ಸಿಸಿಯ ಕಮಾಂಡಿಂಗ್ ಆಫೀಸರ್ ಗ್ರೂಪ್ ಕ್ಯಾಪ್ಟನ್ ವಿ.ಎನ್.ಎಲ್. ರೆಡ್ಡಿ, ಹಾಗೂ ಅಡ್ಜುಟೆಂಟ್ ಜೆಡಬ್ಲ್ಯುಓ ಪ್ರದೀಪ್ ಸಿಂಗ್ ಕಾರ್ಯಕ್ರಮದಲ್ಲಿ ಭಾಗವಹಿಸಿ, ಕೆಡೆಟ್‌ಗಳಿಗೆ ಯೋಗವನ್ನು ಜೀವನದ ಅವಿಭಾಜ್ಯ ಅಂಗವನ್ನಾಗಿ ಅಳವಡಿಸಿಕೊಳ್ಳುವಂತೆ ಪ್ರೋತ್ಸಾಹಿಸಿದರು. ಕಾರ್ಯಕ್ರಮವು ದೇಶಭಕ್ತಿ, ಶಿಸ್ತು ಮತ್ತು ಆರೋಗ್ಯಕರ ಜೀವನದ ಸಂದೇಶವನ್ನು ಸಾರುವ ಮೂಲಕ ಯಶಸ್ವಿಯಾಗಿ ನೆರವೇರಿತು.

# ಸಾಂಪ್ರದಾಯಿಕ ಕಲೆಗೆ ರಂಗೋಲಿ ಅತ್ಯುತ್ತಮ ಮಾಧ್ಯಮ

**ಕೆಂಗೇರಿ, ಜೂ. 24:** ಮಹಿಳೆಯರಲ್ಲಿ ಸುಪ್ತವಾಗಿರುವ ಪ್ರತಿಭೆ, ಸೃಜನಶೀಲತೆ ಹಾಗೂ ಆಲೋಚನೆಗಳ ಅಭಿವ್ಯಕ್ತಿಗೆ ಸಾಂಪ್ರದಾಯಿಕ ಕಲೆ, ರಂಗೋಲಿ ಅತ್ಯುತ್ತಮ ಮಾಧ್ಯಮವಾಗಿದೆ ಎಂದು ಶಾಸಕ ಎಸ್.ಟಿ. ಸೋಮಶೇಖರ್ ತಿಳಿಸಿದ್ದಾರೆ

ಕ್ಷೇತ್ರದ ಉಲ್ಲಾಳು, ಕೆಂಗಲ್ ಹನುಮಂತಯ್ಯ, ನಾಗದೇವನಹಳ್ಳಿ ಹಾಗೂ ಶಿವನಪಾಳ್ಯ ವಾರ್ಡುಗಳ ಕಾಂಗ್ರೆಸ್ ಸಮಿತಿ ವತಿಯಿಂದ ಕೊಮ್ಮಘಟ್ಟದ ಮೈದಾನದಲ್ಲಿ ಆಯೋಜಿಸಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಉದ್ಘಾಟಿಸಿ ರಂಗೋಲಿ ಸ್ಪರ್ಧಾ ವಿಜೇತರಿಗೆ ನಗದು ಪುರಸ್ಕಾರ ನೀಡಿ ಸನ್ಮಾನಿಸಿ ಮಾತನಾಡಿದರುನೆಲಮೂಲ ಸಂಸ್ಕೃತಿಯ ಪ್ರತೀಕ ರಂಗೋಲಿ ಬಿಡಿಸುವುದನ್ನು ನಾಡಿನ ಮಹಿಳೆಯರು ಕರಗತ ಮಾಡಿಕೊಂಡಿದ್ದಾರೆ. ವರದಕ್ಷಿಣೆ ಕಿರುಕುಳ, ಮಹಿಳಾ ದೌರ್ಜನ್ಯ, ಹೆಣ್ಣು ಒಲಿದರೆ ನಾರಿ, ಮುನಿದರೆ ಮಾರಿ, ಕುಡಿತದಿಂದ ಕುಟುಂಬ, ಸಮಾಜದ ಮೇಲೆ ಆಗುವ ದುಷ್ಪರಿಣಾಮಗಳು, ಹೆಣ್ಣು ಮಕ್ಕಳ ಶಿಕ್ಷಣದ ಮಹತ್ವ, ಶಿಕ್ಷಣ ವಂಚಿತ ಬಾಲಕಾರ್ಮಿಕರ ಬವಣೆ, ಸಂವಿಧಾನದ ಆಶಯ, ನೆಲದ ಕಾನೂನಿನ ಅರಿವು, ಶಿಕ್ಷೆ, ಸಹಿತ ನೂರಾರು ವಿಚಾರ, ವಿಷಯಗಳನ್ನು ರಂಗೋಲಿ ಮೂಲಕ ಪರಿಣಾಮಕಾರಿಯಾಗಿ ಚಿತ್ರಿಸಿ "ಮಹಿಳಾ ದಿನಾಚರಣೆ " ಕಳೆಗಟ್ಟುವಂತೆ ಮಾಡಿದ್ದಾರೆ ಎಂದು ಹರ್ಷ ವ್ಯಕ್ತಪಡಿಸಿದರುಸಂಕ್ರಾಂತಿ, ಶಿವರಾತ್ರಿ, ಯುಗಾದಿ, ರಂಜಾನ್ ಸಹಿತ ಹಲವು ಹಬ್ಬ ಹರಿದಿನ, ನಾಡಿನ ಕಲೆ, ಕ್ರೀಡೆ ಸಾಂಸ್ಕೃತಿಕ, ಮಹತ್ವ ಪರಂಪರೆ ಬಿಂಬಿಸುವ ಕಾರ್ಯಕ್ರಮಗಳನ್ನು ಕ್ಷೇತ್ರದ ನಗರ, ಗ್ರಾಮಾಂತರ ಪ್ರದೇಶಗಳಲ್ಲಿ ಮಹಿಳೆಯರ ಮುಂದಾಳತ್ವದಲ್ಲಿ ವಿಶಿಷ್ಟವಾಗಿ ಅಚ್ಚುಕಟ್ಟಾಗಿ ಆಯೋಜಿಸಲಾಗುತ್ತಿದೆ ಎಂದರು



ಮಹಿಳೆಯರ ಆರ್ಥಿಕ ಸ್ವಾವಲಂಬನೆ ಹಾಗೂ ಸಬಲೀಕರಣಕ್ಕೆ ವಿಶೇಷ ಒತ್ತು ನೀಡುವ ನಿಟ್ಟಿನಲ್ಲಿ ಪರಿಣಿತರಿಂದ ಕ್ಷೇತ್ರದಾದ್ಯಂತ ಉಚಿತ ವೃತ್ತಿ ಆಧಾರಿತ ತರಬೇತಿ ಹಾಗೂ ಮಾರ್ಗದರ್ಶನ ಒದಗಿಸಲಾಗುತ್ತಿದೆ.ಜತೆಗೆ ಸ್ವ ಉದ್ಯೋಗಕ್ಕೂ ಸಹಾಯ ಮಾಡಲಾಗುತ್ತಿದೆ. ಮಹಿಳೆಯರ ಜೀವನೋಪಾಯಕ್ಕೆ ಇದರಿಂದ ಉಪಯೋಗವಾಗುತ್ತಿದೆ. ಮಕ್ಕಳ ಶಿಕ್ಷಣ, ಕೌಟುಂಬಿಕ ನಿರ್ವಹಣೆಗೂ ಸಹಾಯವಾಗುತ್ತಿದೆಸ್ಪರ್ಧೆಯಲ್ಲಿ ಭಾಗವಹಿಸಿದ್ದ ಸುಮಾರು 17300 ಮಹಿಳೆಯರಿಗೆ ಸಮಾಧಾನಕರ ಬಹುಮಾನ, 400 ಮಂದಿ ವಿಜೇತರಿಗೆ ನಗದು ನೀಡಿ ಸನ್ಮಾನಿಸಲಾಯಿತು. ಇದೇ ವೇಳೆ ಗ್ರಾಮ ದೇವತೆ ಉತ್ಸವ ಮೂರ್ತಿಗಳನ್ನು ಫಲ ಪುಷ್ಪಗಳೊಂದಿಗೆ ವಿಶಿಷ್ಟವಾಗಿ ಅಲಂಕರಿಸಿ ವೇದಿಕೆ ಸಮೇತ ಪ್ರತಿಷ್ಠಾಪಿಸಿ ಆರಾಧಿಸಲಾಯಿತು. ಸಾವಿರಾರು ಸದ್ಭಕ್ತರು ದೇವರ ದರ್ಶನ ಪಡೆದು ಪುನೀತರಾದರು. ಸಾರ್ವಜನಿಕರಿಗೆ ಹೋಳಿಗೆ ಊಟದ ವ್ಯವಸ್ಥೆ ಮಾಡಲಾಗಿತ್ತು.

# ಸ್ವಚ್ಛ ಪರಿಸರಕ್ಕಾಗಿ ಸ್ವಚ್ಛತಾ ಅಭಿಯಾನ

**ಕೆ.ಆರ್.ಪುರ,ಜೂ.24–** ಸ್ವಚ್ಛ ಪರಿಸರ ನೀಡುವ ನಿಟ್ಟಿನಲ್ಲಿ ಕ್ಷೇತ್ರದ ಬಾಬುಸಾಪಾಳ್ಯ ವಾರ್ಡನ ದಿವ್ಯಶಿವಕುಮಾರ್ ಗೌಡ ಅವರ ನೇತೃತ್ವದ ತಂಡ ಕೋಕನೇಟ್ ಗ್ರೋ ಲೇಔಟ್‌ನಲ್ಲಿ ತಂಡ ಸ್ವಚ್ಛತಾ ಅಭಿಯಾನ ನಡೆಸಿದರು.ಕಸದ ಬ್ಲಾಕ್ ಸ್ಪಾಟ್ ಗಳನ್ನು ಗುರುತಿಸುತ್ತಿರುವ ತಂಡ ಪ್ರದೇಶವನ್ನು ಸ್ವಚ್ಛಗೊಳಿಸಿ, ಮೇಶ್ ಅವಳವಡಿಸುವ ಮೂಲಕ ಶಾಶ್ವತ ಕ್ರಮಕ್ಕೆ ಮುಂದಾಗಿದೆ.ಕಾರ್ಯಕ್ರಮದಲ್ಲಿ ಮಾತನಾಡಿದ ಬಾಬುಸಾಪಾಳ್ಯದ ವಾರ್ಡನ ಜಿಬಿಎ ಆಕಾಂಕ್ಷಿ ದಿವ್ಯಶಿವಕುಮಾರ್ ಗೌಡ ಅವರು ನಮ್ಮ ಮನೆ ನಮ್ಮ ಬಡಾವಣೆ ಸ್ವಚ್ಛತಾ ಆಂದೋಲನ ಅಡಿ ಸ್ವಯಂಪ್ರೇರಿತವಾಗಿ ಸ್ವಚ್ಛಾತಾ ಕಾರ್ಯ ಮಾಡಲಾಗುತ್ತಿದೆ ಎಂದು ತಿಳಿಸಿದರು.ಡೆಂಗ್ಯೂ,ಮಲೇರೀಯಾ ಸೇರಿದಂತೆ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಲಾಗುತ್ತಿದ್ದು,ಖಾಲಿ ನಿವೇಶಗಳ ಸ್ವಚ್ಛತೆ ಸಹ ಮಾಡಲಾಗುತ್ತಿದೆ ಎಂದು ಹೇಳಿದರು.ಇದರಿಂದ ನಮ್ಮ ತಂಡದ ಮೂಲಕ ವಾರದಲ್ಲಿ ಎರಡು ದಿನ ಅಭಿಯಾನ ನಡೆಸುವ ಮೂಲಕ ಸ್ವಚ್ಛ ಬಾಬುಸಾಪಾಳ್ಯ ವಾರ್ಡ ಮಾಡುತ್ತೆವೆ,ಅಲ್ಲದೆ ಸಮಾಜಿಕ ಅರಿವು ಮೂಡಿಸುವ ಕಾರ್ಯವನ್ನು



ಮಾಡಲಾಗುವುದು ಎಂದು ತಿಳಿಸಿದರು.ನಮ್ಮ ವಾರ್ಡ ಸ್ವಚ್ಛವಾರ್ಡ ಅಭಿಯಾನದ ಅಡಿ ಸ್ವಚ್ಛತಾ ಅಭಿಯಾನ ನಡೆಸಲಾಗುತ್ತಿದ್ದು,ವಾರ್ಡನ ಅಭಿವೃದ್ಧಿಗೆ ಪೂರಕವಾದ ಕಾರ್ಯಕ್ರಮಗಳನ್ನು ಮಾಡುವುದಾಗಿ ಭರವಸೆ ನೀಡಿದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE